PRGI : KNKAN/26/A0629 ವಿಜಯನಗರ-ಬಳ್ಳಾರಿ-ಕೊಪ್ಪಳ-ರಾಯಚೂರು-ಗದಗ-ಯಾದಗಿರಿ-ದಾವಣಗೆರೆ-ಹಾವೇರಿ-ಕಲಬುರ್ಗಿ- ಜಿಲ್ಲೆಗಳಲ್ಲಿ ಪ್ರಸಾರಿತ

NO.PMG/KA/NK/BLY/04/2026-2028

# ಹೊಸಪೇಟೆ ಧ್ವನಿ

HOSAPETE DHWANI

ಸ್ವಾಸ್ಥ್ಯ ಸಮಾಜಕ್ಕಾಗಿ ನಮ್ಮ ಧ್ವನಿ

Kannada Daily morning news paper

ಕನ್ನಡ ದಿನ ಪತ್ರಿಕೆ

ಸಂಪಾದಕರು ಕೆ.ಪ್ರಕಾಶ ಕಾಕುಬಾಳು

Editor : K. prakash Kakubalu ಮೊ. 9342568684 VIJAYANAGARA

ಸಂಪುಟ : 01 ಸಂಚಿಕೆ : 191 ಶುಕ್ರವಾರ ದಿನಾಂಕ : 16-10-2026 ಪುಟ-4 ಬೆಲೆ : 2 ರೂ. E mail: hosapetedhwani32026@gmail.com

Volume 01 Issue : 191 Friday Date: 16-10-2026 Page-4 Rs : 2 ರೂ. E mail: hosapetedhwani32026@gmail.com

ನಾಯಕ ಸಮಾಜದ ಜಯಂತಿಯಲ್ಲಿ ಸುದೀಪ್ ಅವರನ್ನು ಮೊದಲು ಪರಿಚಯಿಸಿದ್ದೇ ನಾನು. ನಾನು ವಕೀಲ ಎಲ್ಲರ ಪ್ರಶ್ನೆಗೆ ಉತ್ತರ ಕೊಡಬಲ್ಲೆ. ಸುದೀಪ್ ಅವರೇ ನೀವು ಬನ್ನಿ ನಿಮ್ಮ ನಾಯಕತ್ವದಲ್ಲೇ ಹೋರಾಡೋಣ. ಫೇವರಿಸಂ ಬೆಳೆಸೋ ಹೇಳಿಕೆ ಒಳ್ಳೇದಲ್ಲ.

–ವಿ.ಎಸ್. ಉಗ್ರಪ್ಪ
ಮಾಜಿ ಸಂಸದ



# ರೈತ ಮಹಿಳೆಯರಿಗೂ ಸಮಾನ ಹಕ್ಕು ಸಿಗಲಿ : ಸಿಇಓ ಗರಿಮಾ ಪನ್ವಾರ್

**ಹೊಸಪೇಟೆ ಧ್ವನಿ ನ್ಯೂಸ್ :**

**ವಿಜಯನಗರ(ಹೊಸಪೇಟೆ):** ಕೃಷಿ ಕ್ಷೇತ್ರದಲ್ಲಿ ಮಹಿಳೆಯರ ಪರಿಶ್ರಮ ಅಪಾರವಾಗಿದ್ದು, ಅವರ ಶ್ರಮಕ್ಕೆ ತಕ್ಕ ಮನ್ನಣೆ ದೊರೆಯಬೇಕು. ರೈತ ಮಹಿಳೆಯರ ಹೆಸರಿನಲ್ಲಿಯೂ ಜಮೀನಿನ ಖಾತೆ ಹಾಗೂ ದಾಖಲೆಗಳಿದ್ದರೆ ಅವರಿಗೆ ಹೆಚ್ಚಿನ ಸ್ವಾತಂತ್ರ್ಯ, ಆರ್ಥಿಕ ಭದ್ರತೆ ಮತ್ತು ಆತ್ಮವಿಶ್ವಾಸ ದೊರೆಯಲಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗರಿಮಾ ಪನ್ವಾರ್ ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಹಾಗೂ ಕೃಷಿ ಇಲಾಖೆ ವತಿಯಿಂದ ಜಂಟಿ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಗುರುವಾರ ಮಹಿಳಾ ಕಿಸಾನ್ ದಿವಸ್ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕೃಷಿ ಕ್ಷೇತ್ರದಲ್ಲಿ ಹಗಲಿರುಳು ಶ್ರಮಿಸುವ ಮಹಿಳೆಯರಿಗೆ ಜಮೀನಿನ ದಾಖಲೆಗಳಲ್ಲಿ ಮತ್ತು ಆಸ್ತಿಯಲ್ಲಿ ಸಮಾನ ಹಕ್ಕು ಹಾಗೂ ಪ್ರಾಮುಖ್ಯತೆ ಸಿಗಬೇಕು. ಕೃಷಿ ಉತ್ಪಾದನೆಯಲ್ಲಿ ಮಹಿಳೆಯರ ಶ್ರಮ ಅಪಾರವಾಗಿದ್ದು, ದೇಶದ ಒಟ್ಟು ಉತ್ಪಾದನೆಯಲ್ಲಿ ಶೇಕಡಾ 17ರಷ್ಟು ಕೊಡುಗೆ ನೀಡುತ್ತಿರುವ ಮಹಿಳಾ ಕೃಷಿಕರ ಶ್ರಮವನ್ನು ಗುರುತಿಸಿ ಗೌರವಿಸುವುದು ಹಾಗೂ ಅವರ ಹಕ್ಕುಗಳನ್ನು ರಕ್ಷಿಸುವುದು ಎಲ್ಲರ ಕರ್ತವ್ಯ. ರೈತ ಮಹಿಳೆಯರು ಪ್ರಗತಿಪರ ರೈತರಾಗಿ ಗುರುತಿಸಿಕೊಳ್ಳುತ್ತಿರುವುದು ಗಮನಾರ್ಹ ಸಂಗತಿ. ಕೃಷಿ ಕ್ಷೇತ್ರದಲ್ಲಿ ಮಹಿಳೆಯರ ಪಾಲ್ಗೊಳ್ಳುವಿಕೆಯನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಬಳಸಿಕೊಳ್ಳುವ ಅಗತ್ಯವಿದೆ. ರೈತ ಮಹಿಳೆಯರು ಹಲವು ಸವಾಲುಗಳನ್ನು ಎದುರಿಸುತ್ತಿದ್ದು, ಅವುಗಳನ್ನು ಮೆಟ್ಟಿನಿಂತು ಸಾಧನೆಯ ಹಾದಿಯಲ್ಲಿ ಮುನ್ನಡೆಯಬೇಕು ಎಂದರು.

ಮಹಿಳೆಯರು ತೆಗೆದುಕೊಳ್ಳುವ ನಿರ್ಧಾರಗಳು ಅವರ ಜೀವನದ ದಿಕ್ಕನ್ನೇ ಬದಲಾಯಿಸಬಲ್ಲವು. ಭವಿಷ್ಯದಲ್ಲಿ ಉತ್ತಮ ಬದಲಾವಣೆ ತಂದುಕೊಳ್ಳುವ ಗುರಿಯೊಂದಿಗೆ ಮುನ್ನಡೆಯಬೇಕು. ಅಂದುಕೊಂಡ ಗುರಿ ಸಾಧಿಸಲು ಸಾಧ್ಯವಾಗದಿದ್ದರೂ ಪರಿಶ್ರಮದ ಮೂಲಕ ಪ್ರಗತಿಪರ ರೈತರಾಗಿ ಹೊರಹೊಮ್ಮುವ ಸಂಕಲ್ಪ ಹೊಂದಬೇಕು ಎಂದು ಸಲಹೆ ನೀಡಿದರು.

ಕೃಷಿ ಹಾಗೂ ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯ, ಪಿಂಚಣಿ ಮತ್ತು ಸಬ್ಸಿಡಿಗಳನ್ನು ಪಡೆಯಲು ಅಗತ್ಯ ದಾಖಲೆಗಳನ್ನು ಹೊಂದಿರುವ ಕುರಿತು ರೈತ ಮಹಿಳೆಯರಲ್ಲಿ ಜಾಗೃತಿ ಮೂಡಿಸಬೇಕು. ಮಹಿಳೆಯರ ಹೆಸರಿನಲ್ಲಿ ಜಮೀನಿನ ದಾಖಲೆಗಳಿದ್ದರೆ ಅವರು ಸ್ವಾವಲಂಬಿಗಳಾಗಿ ತಮ್ಮ ನಿರ್ಧಾರಗಳನ್ನು ತಾವೇ ತೆಗೆದುಕೊಳ್ಳಲು ಅನುಕೂಲವಾಗುತ್ತದೆ. ಕುಟುಂಬ ಹಾಗೂ ಸಮಾಜದಲ್ಲಿ ಮಹಿಳೆಯರಿಗೆ ಸಮಾನ ಹಕ್ಕು ಮತ್ತು ಗೌರವ ದೊರೆಯಬೇಕು ಎಂದು ತಿಳಿಸಿದರು.

**ಹೆಣ್ಣುಮಕ್ಕಳ ಶಿಕ್ಷಣಕ್ಕೆ ಆದ್ಯತೆ ನೀಡಿ :** ಹೆಣ್ಣುಮಕ್ಕಳಿಗೆ ಬಾಲ್ಯವಿವಾಹ ಮಾಡಿ ಅವರ ಭವಿಷ್ಯವನ್ನು ಮೊಟಕುಗೊಳಿಸುವ ಬದಲು ಉತ್ತಮ ಶಿಕ್ಷಣ ನೀಡಿ, ಸಮಾಜದಲ್ಲಿ ಉನ್ನತ ಸ್ಥಾನಕ್ಕೇರಲು ಅವಕಾಶ ಕಲ್ಪಿಸಬೇಕು. ಮಹಿಳೆಯರ ಪರಿಶ್ರಮಕ್ಕೆ ಸೂಕ್ತ ಮನ್ನಣೆ ದೊರೆತಾಗ ಅವರು ಯಶಸ್ವಿ ಮಹಿಳೆಯರಾಗಿ ಹೊರಹೊಮ್ಮುವುದರಲ್ಲಿ ಸಂಶಯವಿಲ್ಲ ಎಂದು ಆಶಯ ವ್ಯಕ್ತಪಡಿಸಿದರು.

ಈ ಕಾರ್ಯಕ್ರಮದಲ್ಲಿ ವಿವಿಧ ಕೃಷಿ ಚಟುವಟಿಕೆಗಳಲ್ಲಿ ಸಾಧನೆ ಮಾಡಿದ ಮಹಿಳಾ ಸಾಧಕಿಯರನ್ನು ಸನ್ಮಾನಿಸಲಾಯಿತು ಹಾಗೂ ಸ್ವಸಹಾಯ ಸಂಘಗಳಿಗೆ ಪ್ರಮಾಣ ಪತ್ರಗಳನ್ನು ವಿತರಿಸಲಾಯಿತು. ಡಾ. ಪ್ರೊ. ಸುನೀತಾ ಅವರು ಮಹಿಳಾ ಕಿಸಾನ್ ದಿವಸ್ ಅಂಗವಾಗಿ ಸಂಸ್ಕರಣೆ, ಮೌಲ್ಯವರ್ಧನೆ ಪ್ರಾಮುಖ್ಯತೆ ಮತ್ತು ಅವಕಾಶಗಳ ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಕೃಷಿ ಇಲಾಖೆಯ ಜಂಟಿ ಕಾರ್ಯದರ್ಶಿ ಹಾಗೂ ನಿರ್ದೇಶಕ ಮಂಜುನಾಥ, ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ಪ್ರಭುರಾಜ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ರೈತ ಮಹಿಳೆಯರು ಇದ್ದರು.




### ಕೃಷಿ ಉತ್ಪನ್ನಗಳು ಮತ್ತು ಕಸೂತಿ ಕಲೆಗಳ ಪ್ರದರ್ಶನ:

ಮಹಿಳಾ ಕಿಸಾನ್ ದಿವಸ್ ಅಂಗವಾಗಿ ಜಿಲ್ಲಾ ಮಟ್ಟದ ಕೃಷಿ ವಸ್ತು ಪ್ರದರ್ಶನ ಏರ್ಪಡಿಸಲಾಗಿತ್ತು. ಈ ವಸ್ತುಪ್ರದರ್ಶನವನ್ನು ಜಿಲ್ಲಾ ಪಂಚಾಯತ್ ಸಿಇಒ ಉದ್ಘಾಟಿಸಿ ರೈತರೊಂದಿಗೆ ಸಂವಾದ ನಡೆಸಿ ಮಾಹಿತಿ ಪಡೆದುಕೊಂಡರು. ವಸ್ತು ಪ್ರದರ್ಶನದಲ್ಲಿ ಜಿಲ್ಲೆಯ ವಿವಿಧ ತಾಲೂಕುಗಳಿಂದ ಸಿರಿ ಧಾನ್ಯಗಳಾದ ಸಜ್ಜೆ, ನವಣೆ, ಗೋಧಿ ತನೆ, ಚಪ್ಪರದ ಅವರೆ ಹಾಗೂ ಸಾವಯವ ಉತ್ಪನ್ನಗಳಾದ ಪಪ್ಪಾಯ, ನಿಂಬೆ, ಟೊಮೆಟೊ ಮುಂತಾದ ಸಾವಯವ ಉತ್ಪನ್ನಗಳನ್ನು ಪ್ರದರ್ಶಿಸಲಾಯಿತು. ಅದರಲ್ಲೂ ವಿಶೇಷವಾಗಿ ಬಂಜಾರ ಸಮುದಾಯದ ಕೈ ಕಸೂತಿ ಕಲೆಗಳು, ವಿವಿಧ ಬಗೆಯ ಸೀರೆಗಳು ಮತ್ತು ಬಳೆಗಳು ಕರ ಕುಶಲ ವಸ್ತುಗಳ ನೋಡುಗರ ಆಕರ್ಷಿಸುತ್ತಿದ್ದವು.

# ಅ.26 ರಂದು ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಸರಳ ಆಚರಣೆಗೆ ನಿರ್ಧಾರ: ಡಿಸಿ



**ಹೊಸಪೇಟೆ ಧ್ವನಿ ನ್ಯೂಸ್ :**

**ವಿಜಯನಗರ (ಹೊಸಪೇಟೆ) :** ಜಿಲ್ಲೆಯಲ್ಲಿ ಪ್ರಸ್ತುತ ಚುನಾವಣಾ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವ ಹಿನ್ನೆಲೆಯಲ್ಲಿ ಈ ಬಾರಿಯ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಸರಳವಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ತಿಳಿಸಿದ್ದಾರೆ.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಆಯೋಜಿಸಲಾಗಿದ್ದ ಮಹರ್ಷಿ ವಾಲ್ಮೀಕಿ ಜಯಂತಿಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಕ್ಟೋಬರ್ 31ರವರೆಗೆ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ, ಜಿಲ್ಲಾಡಳಿತ ಹಾಗೂ ಪರಿಶಿಷ್ಟ ಕಲ್ಯಾಣ ವರ್ಗಗಳ ಇಲಾಖೆಯ ಸಹಯೋಗದಲ್ಲಿ ಅಕ್ಟೋಬರ್ 26ರಂದು ಸರಳವಾಗಿ ಹಾಗೂ ಸಾಂಕೇತಿಕವಾಗಿ ಆಚರಿಸಲಾಗುವುದು ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಈ ವೇಳೆ ಸಮಾಜದ ಮುಖಂಡರು ಪ್ರತಿಕ್ರಿಯಿಸಿ ಸಮಾಜದ ಹಿರಿಯ ಮುಖಂಡರೊಂದಿಗೆ ಚರ್ಚಿಸಿ ಜಯಂತಿ ಆಚರಣೆಯ ಬಗ್ಗೆ ಅಕ್ಟೋಬರ್ 31ರ ನಂತರ ತಿಳಿಸಲಾಗುವುದು ಎಂದರು.

ವಾಲ್ಮೀಕಿ ಜಯಂತಿ ಕಾರ್ಯಕ್ರಮದ ಅಂಗವಾಗಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿ ಸಾಧನೆ ಮಾಡಿದ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನಲಾಗುವುದು ಎಂದು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ರವಿಕುಮಾರ್ ತಿಳಿಸಿದರು.

ಈ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್. ಜಾಹ್ನವಿ, ಸಮಾಜದ ಮುಖಂಡರು, ಸಂಘ ಸಂಸ್ಥೆಯ ಪದಾಧಿಕಾರಿಗಳು ಇದ್ದರು.

## ಹೊಸಪೇಟೆಯಲ್ಲಿ ಸಕ್ಕರೆ ಕಾರ್ಖಾನೆ ಸ್ಥಾಪನೆಗೆ ಹೋರಾಟ ತೀವ್ರ

# ಅ.18ರಂದು ಶಾಸಕ ಗವಿಯಪ್ಪ ಮನೆ ಎದುರು ಉಪವಾಸ ಸತ್ಯಾಗ್ರಹ

**ಹೊಸಪೇಟೆ ಧ್ವನಿ ನ್ಯೂಸ್ :**

**ಹೊಸಪೇಟೆ :** ವಿಜಯನಗರ ಜಿಲ್ಲೆಯ ಹೊಸಪೇಟೆಯಲ್ಲಿ ಸಕ್ಕರೆ ಕಾರ್ಖಾನೆ ಸ್ಥಾಪನೆಗೆ ಆಗ್ರಹಿಸಿ ರೈತರು ನಡೆಸುತ್ತಿರುವ ಹೋರಾಟ ತೀವ್ರಗೊಂಡಿದೆ. ಸಕ್ಕರೆ ಕಾರ್ಖಾನೆ ಸ್ಥಾಪನೆ ಹೋರಾಟ ಸಮಿತಿ ಸದಸ್ಯರು ಹಳ್ಳಿ ಹಳ್ಳಿಗಳಿಗೆ ತೆರಳಿ ಜನಜಾಗೃತಿ ಮೂಡಿಸುತ್ತಿದ್ದಾರೆ.

ಹೊಸಪೇಟೆ ಸುತ್ತಮುತ್ತಲಿನ ಗ್ರಾಮಗಳು, ಅಮರಾವತಿ ಸೊಸೈಟಿ ಸೇರಿದಂತೆ ವಿವಿಧೆಡೆ ಪ್ರಚಾರ ನಡೆಸಿರುವ ಸಮಿತಿ, ರೈತರ ಹಿತದೃಷ್ಟಿಯಿಂದ ಕಾರ್ಖಾನೆ ಸ್ಥಾಪನೆಯಾಗಲೇಬೇಕು ಎಂದು ಒತ್ತಾಯಿಸಿದೆ.

ನಗರಸಭೆ ಸದಸ್ಯ ಆನಂದ್ ಮಾತನಾಡಿ, ಹೊಸಪೇಟೆಯಲ್ಲಿ ಸಕ್ಕರೆ ಕಾರ್ಖಾನೆ ಸ್ಥಾಪನೆಯಾದರೆ ಕಬ್ಬು ಬೆಳೆಗಾರರಿಗೆ ಸ್ಥಳೀಯವಾಗಿಯೇ ಸಾಗಾಟ ಮತ್ತು ಮಾರಾಟಕ್ಕೆ ಅನುಕೂಲವಾಗಲಿದ್ದು, ಕೃಷಿ ಚಟುವಟಿಕೆಗಳಿಗೆ ಉತ್ತೇಜನ ಸಿಗಲಿದೆ ಎಂದರು. ಎತ್ತಿನ ಬಂಡಿಗಳಲ್ಲಿ ಕಬ್ಬು ಸಾಗಿಸುವ ಸಂಭ್ರಮ ಮತ್ತೆ ಆರಂಭವಾಗುವ ವಾತಾವರಣ ನಿರ್ಮಾಣವಾಗಲಿದೆ ಎಂದು ಆಶಯ ವ್ಯಕ್ತಪಡಿಸಿದರು.

ಅ.18ರಂದು ವಿಜಯನಗರ ಕ್ಷೇತ್ರದ ಶಾಸಕ ಎಚ್.ಆರ್. ಗವಿಯಪ್ಪ ಅವರ ನಿವಾಸದ ಎದುರು ಉಪವಾಸ ಸತ್ಯಾಗ್ರಹ ನಡೆಸಲು ರೈತ ಹೋರಾಟಗಾರರು ನಿರ್ಧರಿಸಿದ್ದಾರೆ. ಸರ್ಕಾರ ಮತ್ತು ಜನಪ್ರತಿನಿಧಿಗಳು ಕ್ರಮ ಕೈಗೊಳ್ಳುವವರೆಗೂ ಹೋರಾಟ ಮುಂದುವರಿಯಲಿದೆ ಎಂದು ಸಮಿತಿ ತಿಳಿಸಿದೆ.



# ಕ್ರೀಡಾಕೂಟಗಳು ಯಶಸ್ಸಿನ ಮೆಟ್ಟಿಲುಗಳು : ಶ್ರೀರಾಮುಲು



**ಹೊಸಪೇಟೆ ಧ್ವನಿ ನ್ಯೂಸ್ :**

**ಕೂಡ್ಲಿಗಿ :** ಕ್ರೀಡಾಕೂಟಗಳು ವಿದ್ಯಾರ್ಥಿಗಳಲ್ಲಿ ಶಿಸ್ತು, ಆತ್ಮವಿಶ್ವಾಸ, ನಾಯಕತ್ವ ಗುಣ ಹಾಗೂ ಕ್ರೀಡಾ ಸ್ಫೂರ್ತಿಯನ್ನು ಬೆಳೆಸುವ ಮೂಲಕ ಯಶಸ್ಸಿನ ಹಾದಿಗೆ ಕೊಂಡೊಯ್ಯುತ್ತವೆ ಎಂದು ಮಾಜಿ ಸಚಿವ ಬಿ. ಶ್ರೀರಾಮುಲು ಅಭಿಪ್ರಾಯಪಟ್ಟರು.

ಅವರು, ಪಟ್ಟಣದ ಮಹಾದೇವ ಮೈಲಾರ ಕ್ರೀಡಾಂಗಣದಲ್ಲಿ ರಾಜಾ ವೀರ ಮದಕರಿ ನಾಯಕ ಜಯಂತ್ಯೋತ್ಸವದ ಅಂಗವಾಗಿ ಆಯೋಜಿಸಿರುವ ಮದಕರಿ ಕಪ್ ಕ್ರಿಕೆಟ್ ಟೂರ್ನಿಯಲ್ಲಿ ಭಾಗವಹಿಸಿ ಮಾತನಾಡಿದರು. ಕ್ರೀಡೆಗಳು ದೈಹಿಕ ಮತ್ತು ಮಾನಸಿಕ ಆರೋಗ್ಯದ ಜತೆಗೆ ಜೀವನದಲ್ಲಿ ಸೋಲು–ಗೆಲವುಗಳನ್ನು ಸಮಾನವಾಗಿ ಸ್ವೀಕರಿಸುವ ಮನೋಭಾವ ಹೆಚ್ಚಿಸುತ್ತವೆ. ಯುವಕರು ಕ್ರೀಡೆಯಲ್ಲಿ ಹೆಚ್ಚಿನ ಆಸಕ್ತಿ ವಹಿಸಿ ಸಾಧನೆಯತ್ತ ಮುನ್ನಡೆಯಬೇಕು ಎಂದು ಶ್ರೀ ರಾಮುಲು ಕರೆ ನೀಡಿದರು.

ಈ ಸಂದರ್ಭದಲ್ಲಿ ವಿಜಯನಗರ ಬಿಜೆಪಿ ಜಿಲ್ಲಾಧ್ಯಕ್ಷ ಸಂಜೀವರೆಡ್ಡಿ, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗುಳಿಗಿ ವೀರೇಂದ್ರ ಕುಮಾರ್, ಅಖಿಲ ಕರ್ನಾಟಕ ವಾಲ್ಮೀಕಿ ಮಹಾಸಭಾ ಕೂಡ್ಲಿಗಿ ತಾಲೂಕು ಅಧ್ಯಕ್ಷ ಎಸ್. ಸುರೇಶ, ಮಾಜಿ ಪ. ಪಂ. ಸದಸ್ಯ ಪಿ. ಚಂದ್ರು, ಹೊಂಬಾಳೆ ರೇವಣ್ಣ, ಜೂಮ್ಮೊಬನಹಳ್ಳಿ ಚಂದ್ರಮೌಳಿ, ಯುವ ಮುಖಂಡ ಸುದರ್ಶನ್ ಅಮಲಾಪುರ, ಶಿಕ್ಷಕ ಪಾಂಡುರಂಗ, ಸಕ್ರಪ್ಪ, ಮಹೇಶ್ ಇನ್ನಿತರರಿದ್ದರು.

# ಸಂವಿಧಾನ ಆಶಯದಂತೆ ದೇಶ ಕಟ್ಟಲು ಕರೆ : ನ್ಯಾಯಾಧೀಶೆ ಹೆಚ್. ಜೆ. ಶಿಲ್ಪಾ

**ಕೂಡ್ಲಿಗಿ :** ಯುವಕ, ಯುವತಿಯರು ನಾಯಕತ್ವ ಗುಣವನ್ನು ಹೊಂದುವ ಮೂಲಕ ಸಂವಿಧಾನದ ಆಶಯದಂತೆ ದೇಶವನ್ನು ಸದೃಢವಾಗಿ ಕಟ್ಟುವ ನಿಟ್ಟಿನಲ್ಲಿ ಮುನ್ನಡೆಯಬೇಕು ಎಂದು ಪಟ್ಟಣದ ಕಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶೆ ಎಚ್.ಜೆ.ಶಿಲ್ಪಾ ತಿಳಿಸಿದರು.

ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ತಾಲೂಕು ಆಡಳಿತ ಆಡಳಿತ, ತಾಪಂ, ಪಪಂ, ಶಿಕ್ಷಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ ಆಶ್ರಯದಲ್ಲಿ ಬುಧವಾರ ಆಯೋಜಿಸಿದ್ದ ಯುವ ಸಂಸತ್ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು. ದೇಶದ ಭವಿಷ್ಯ ಯುವ ಪೀಳಿಗೆಯ ಕೈಯಲ್ಲಿದ್ದು, ಪ್ರಜಾಪ್ರಭುತ್ವವನ್ನು ಕಾಪಾಡುವ ಗುರುತರ ಜವಾಬ್ದಾರಿಯೂ ಅಡಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ತಹಸೀಲ್ದಾರ್ ವಿ.ಕೆ.ನೇತ್ರಾವತಿ ಮಾತನಾಡಿ, ಡಾ.ಬಿ.ಆರ್.ಅಂಬೇಡ್ಕರ್ ಅವರು ಬರೆದ ಸಂವಿಧಾನದ ಮೂಲಕ ನಮಗೆಲ್ಲ ಧ್ವನಿ ಬಂದಿದೆ. ರಾಜ್ಯ ಸರಕಾರದ ಮಹತ್ವಕಾಂಕ್ಷೆಯ ಯುವ ಸಂಸತ್ತು ಕಾರ್ಯಕ್ರಮ ವಾಗಿದ್ದು, ಯುವ ಸಮೂಹ ಇಂಥ ಕಾರ್ಯಕ್ರಮದ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ತಿಳಿಸಿದರು. ತಾಪಂ ಇಒ ನರಸಪ್ಪ, ವಕೀಲರ ಸಂಘದ ತಾಲೂಕು ಅಧ್ಯಕ್ಷ ಹೊನ್ನೂರಪ್ಪ ಮಾತನಾಡಿದರು. ಬಿಇಒ ಮೈಲೇಶ್ ಬೇವೂರು ಪ್ರಾಸ್ತಾವಿಕ ನುಡಿದರು.




ಸಮಾಜ ಕಲ್ಯಾಣ ಇಲಾಖೆ ಗ್ರೇಡ್ 1 ಸಹಾಯಕ ನಿರ್ದೇಶಕ ಜಗದೀಶ್ ದಿಡಗೂರು ಅವರು ಸಂವಿಧಾನ ಪೀಠಿಕೆ ಬೋಧಿಸಿದರು. ಈ ಸಂದರ್ಭದಲ್ಲಿ ವಕೀಲರ ಸಂಘದ ತಾಲೂಕು ಉಪಾಧ್ಯಕ್ಷ ಮಲ್ಲಿಕಾರ್ಜುನ, ಜಂಟಿ ಕಾರ್ಯದರ್ಶಿ ಡಿ.ಎಚ್.ದುರುಗೇಶ್, ಸರಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಎಸ್.ವೆಂಕಟೇಶ್, ಸರಕಾರಿ ಪ್ರಥಮದರ್ಜೆ ಕಾಲೇಜು ಪ್ರಾಂಶುಪಾಲ ಡಾ.ಎಸ್.ಷಣ್ಮುಖನಗೌಡ, ಸಮಾಜ ಕಲ್ಯಾಣ ಇಲಾಖೆ ವ್ಯವಸ್ಥಾಪಕ ಫಕೀರಪ್ಪ, ಸಿಪಿಐ ಪ್ರಲ್ಹಾದ್ ಆರ್.ಚನ್ನಗಿರಿ, ಸಿಡಿಪಿಒ ಮಾಲಂಬೀ, ಉಪನ್ಯಾಸಕರಾದ ಮಹಂತೇಶ್, ತಾತಪ್ಪ, ನಿಂಗಪ್ಪ, ಸಮಾಜ ಕಲ್ಯಾಣ ಇಲಾಖೆ ವಸತಿ ನಿಲಯ ಮೇಲ್ವಿಚಾರಕರಾದ ಮಹಮ್ಮದ್ ಸೈಯದ್, ದುರುಗೇಶ, ಜಯಮ್ಮ, ಅನುರಾಧಾ, ಶ್ರೀಕಾಂತ್ ಸೇರಿ ಇತರರಿದ್ದರು.

**ಗಮನಸೆಳೆದ ಯುವ ಸಂಸತ್ ಸಭೆ :**

ಕೂಡ್ಲಿಗಿಯಲ್ಲಿ ನಡೆದ ಯುವ ಸಂಸತ್ ಸಭೆಯು ವಿಶೇಷವಾಗಿ ಗಮನ ಸೆಳೆಯಿತು. ಸರಕಾರಿ ಜೂನಿಯರ್ ಕಾಲೇಜು, ಎಸ್‌ಎವಿಟಿ ಸರಕಾರಿ ಪ್ರಥಮದರ್ಜೆ ಕಾಲೇಜು ಹಾಗೂ ಜ್ಞಾನಭಾರತಿ ಬಿ.ಇಡಿ ಕಾಲೇಜಿನ ವಿದ್ಯಾರ್ಥಿಗಳು ಹಾಗೂ ಕಾನಹೊಸಹಳ್ಳಿ ಡಾ.ಬಿ.ಆರ್. ಅಂಬೇಡ್ಕರ್ ವಸತಿ ಶಾಲೆ ಮಕ್ಕಲು ಯುವ ಜನಪ್ರತಿನಿಧಿಗಳಾಗಿ ಭಾಗವಹಿಸಿದ್ದರು. ಅಲ್ಲದೆ, ಬರ, ಕುಡಿಯುವ ನೀರು, ನಿರುದ್ಯೋಗ, ಶೈಕ್ಷಣಿಕ ಸಮಸ್ಯೆ ಸೇರಿ ನಾಡಿನ ಗಂಭೀರ ಸಮಸ್ಯೆಗಳ ಕುರಿತು ಕಲಾಪದಲ್ಲಿ ಚರ್ಚೆ ನಡೆಯಿತು. ಸಭಾಧ್ಯಕ್ಷರು, ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ವಿರೋಧಪಕ್ಷದ ನಾಯಕರು, ಸಚಿವರು, ಶಾಸಕರು ಸೇರಿದಂತೆ ಜನಪ್ರತಿನಿಧಿಗಳಾಗಿ ವಿದ್ಯಾರ್ಥಿಗಳೇ ನಿರ್ವಹಿಸಿದ್ದು ನೋಡುಗರ ಗಮನಸೆಳೆಯಿತು.

# ಗೋಕಟ್ಟೆ ಪುನಃಶ್ಚೇತನ ಕಾಮಗಾರಿ ಕೂಲಿಕಾರರಿಗೆ ಆರೋಗ್ಯ ತಪಾಸಣೆ ಶಿಬಿರ




**ಹೊಸಪೇಟೆ ಧ್ವನಿ ನ್ಯೂಸ್ :**

**ಕೂಡ್ಲಿಗಿ :** ತಾಲೂಕಿನ ಬಣವಿಕಲ್ಲು ಗ್ರಾ ಪಂ ವ್ಯಾಪ್ತಿಯ ಬಣವಿಕಲ್ಲು ಗ್ರಾಮದ ಗೋಕಟ್ಟೆ ಪುನಶ್ಚೇತನ ಕಾಮಗಾರಿಯಲ್ಲಿ ಕೆಲಸ ನಿರ್ವಹಿಸುತ್ತಿದ್ದ ಕೂಲಿಕಾರರಿಗೆ, ಕಾಮಗಾರಿ ಸ್ಥಳದಲ್ಲಿ ಆರೋಗ್ಯ ಅಭಿಯಾನದಡಿ ಗುರುವಾರ ಆರೋಗ್ಯ ಶಿಬಿರ ಆಯೋಜನೆ ಮಾಡಲಾಗಿತ್ತು.

ಸಭೆಯಲ್ಲಿ ಆರೋಗ್ಯ ಶಿಬಿರ ಉದ್ದೇಶ, ವಿಭಿ ಜಿ ರಾಮ್ ಜಿ ಯೋಜನೆಯಡಿ ಸಿಗುವ ವೈಯಕ್ತಿಕ ಕಾಮಗಾರಿ ಸೌಲಭ್ಯಗಳ ಕುರಿತು ತಿಳಿಸಲಾಯಿತು, ಬಾಲ್ಯ ವಿವಾಹ ತಡೆಗಟ್ಟುವ ಕುರಿತು ಮಾಹಿತಿ ನೀಡಲಾಯಿತು. ಮತ್ತು ನಾಯಿ ಮತ್ತು ಹಾವು ಕಡೆದ ಸಂದರ್ಭದಲ್ಲಿ ಸಾಂಪ್ರ ದಾಯಿಕ ಮನೆಮದ್ದುಗಳನ್ನು ಬಳಸಬಾರದು ತಕ್ಷಣ ಆಸ್ಪತ್ರೆಗೆ ತೆರಳಿ ಚಿಕಿತ್ಸೆ ಪಡೆಯುವಂತೆ ತಿಳಿಸಲಾಯಿತು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿಯ ಪಂಚಾಯತಿ ಕಾರ್ಯದರ್ಶಿಗಳು, ಆರೋಗ್ಯ ಇಲಾಖೆ ಅಧಿಕಾರಿಗಳು ಮತ್ತು ಸಿಬ್ಬಂದಿಗಳು, ತಾಲೂಕ ಐಇಸಿ ಸಂಯೋಜಕರು, ಗ್ರಾಮ ಪಂಚಾಯಿತಿಯ ಸಿಬ್ಬಂದಿಗಳು, ವಿಭಿ ಜಿ ರಾಮ್ ಜಿ ಯೋಜನೆಯ ಕೂಲಿ ಕಾರ್ಮಿಕರು ಮತ್ತು ಮೇಟಿಗಳು ಉಪಸ್ಥಿತರಿದ್ದರು.

# ಬಳ್ಳಾರಿಯಲ್ಲಿ ಕನ್ನಡ ಧ್ವಜಕಟ್ಟೆ, ಡಾ. ರಾಜ್ ಮಹಾದ್ವಾರ ನಿರ್ಮಾಣಕ್ಕೆ ಆಗ್ರಹ

## ಪುನೀತ್ ರಾಜ್‌ಕುಮಾರ್ ಪುತ್ಥಳಿ ಸ್ಥಳದ ಅಭಿವೃದ್ಧಿ, ಉದ್ಯಾನವನಗಳ ಸುಧಾರಣೆಗೆ ಮನವಿ

**ಹೊಸಪೇಟೆ ಧ್ವನಿ ನ್ಯೂಸ್ :**

**ಬಳ್ಳಾರಿ :** ನಗರದ ಕನ್ನಡದ ಸಾಂಸ್ಕೃತಿಕ ಪರಂಪರೆಯನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಕನ್ನಡ ಧ್ವಜಕಟ್ಟೆ ನಿರ್ಮಾಣ, ವರನಟ ಡಾ. ರಾಜ್‌ಕುಮಾರ್ ಹೆಸರಿನಲ್ಲಿ ಮಹಾದ್ವಾರ ಸ್ಥಾಪನೆ ಹಾಗೂ ಕರ್ನಾಟಕ ರತ್ನ ಡಾ. ಪುನೀತ್ ರಾಜ್‌ಕುಮಾರ್ ಅವರ ಪುತ್ಥಳಿ ಸ್ಥಳದ ಅಭಿವೃದ್ಧಿ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಕನ್ನಡಪರ ಅಭಿಮಾನಿಗಳು ಜಿಲ್ಲಾಧಿಕಾರಿ ಬಿ. ನಾಗೇಂದ್ರ ಪ್ರಸಾದ್ ಅವರಿಗೆ ಮನವಿ ಸಲ್ಲಿಸಿದರು.



ನಗರದ ಅನಂತಪುರ ರಸ್ತೆಯಲ್ಲಿರುವ ಜಿಲ್ಲಾಧಿಕಾರಿ ಕಚೇರಿಯಲ್ಲಿ ಮನವಿ ಸಲ್ಲಿಸಿದ ಅವರು, ನಗರದ ಹೃದಯಭಾಗದ ಸಂಗಮ ವೃತ್ತದಲ್ಲಿ ಕನ್ನಡ ಧ್ವಜಕಟ್ಟೆ ನಿರ್ಮಿಸಿ ನಿರಂತರವಾಗಿ ಕನ್ನಡ ಧ್ವಜ ಹಾರಾಡುವಂತೆ ವ್ಯವಸ್ಥೆ ಕಲ್ಪಿಸಬೇಕು ಎಂದು ಒತ್ತಾಯಿಸಿದರು. ಗಡಿಗಿ ಚನ್ನಪ್ಪ ವೃತ್ತದಿಂದ ಎಂ.ಜಿ. ರಸ್ತೆಯವರೆಗೆ ಡಾ. ರಾಜ್‌ಕುಮಾರ್ ಅವರ ಹೆಸರನ್ನು ನಾಮಕರಣ ಮಾಡಲಾಗಿದ್ದರೂ ಸೂಕ್ತ ನಾಮಫಲಕಗಳಿಲ್ಲ. ಹೀಗಾಗಿ ಗಡಿಗಿ ಚನ್ನಪ್ಪ ವೃತ್ತದಲ್ಲಿ ಡಾ. ರಾಜ್‌ಕುಮಾರ್ ಅವರ ಹೆಸರಿನಲ್ಲಿ ಮಹಾದ್ವಾರ ನಿರ್ಮಿಸಿ ಗೌರವ ಸಲ್ಲಿಸಬೇಕು ಎಂದು ಮನವಿಯಲ್ಲಿ ಕೋರಿದರು.

ನಗರದ ಡಾ. ರಾಜ್‌ಕುಮಾರ್ ಉದ್ಯಾನವನವನ್ನು ಅಭಿವೃದ್ಧಿಪಡಿಸಿ, ಸಾರ್ವಜನಿಕರಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸಬೇಕು. ಉದ್ಯಾನವನದಲ್ಲಿ ನಡೆಯುವ ಅನೈತಿಕ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಪುನೀತ್ ಪುತ್ಥಳಿ ಸ್ಥಳಕ್ಕೆ ಮೂಲಸೌಕರ್ಯ ಕಲ್ಪಿಸಿ ಜಿಲ್ಲಾ ಕ್ರೀಡಾಂಗಣದಲ್ಲಿರುವ ಕರ್ನಾಟಕ ರತ್ನ ಡಾ. ಪುನೀತ್ ರಾಜ್‌ಕುಮಾರ್ ಅವರ ಪುತ್ಥಳಿಯ ಬಳಿ ಸಾರ್ವಜನಿಕರು ಗೌರವ ಸಲ್ಲಿಸಲು ಅನುಕೂಲವಾಗುವಂತೆ ಮೆಟ್ಟಿಲು ಅಥವಾ ಏಣಿ ನಿರ್ಮಿಸಬೇಕು. ಅಲ್ಲಿರುವ ಕೆರೆಯನ್ನು ಅಭಿವೃದ್ಧಿಪಡಿಸಿ, ಕಾವಲುಗಾರರನ್ನು ನೇಮಿಸಬೇಕು. ಆಹಾರ ಮಳಿಗೆಗಳನ್ನು ಸ್ಥಾಪಿಸುವುದರ ಜತೆಗೆ ಗಿಡಗಳನ್ನು ನೆಟ್ಟು ಹಸಿರು ಪರಿಸರ ನಿರ್ಮಿಸಬೇಕು ಎಂದು ಮನವಿ ಮಾಡಿದರು.

ಮಕ್ಕಳಿಗಾಗಿ ಆಟದ ಸಾಮಗ್ರಿಗಳನ್ನು ಅಳವಡಿಸುವುದು, ಸಾರ್ವಜನಿಕರು ಕುಳಿತುಕೊಳ್ಳಲು ಬೆಂಚುಗಳನ್ನು ಹಾಕುವುದು ಹಾಗೂ ಬೆಳಕಿನ ಕೊರತೆ ನೀಗಿಸಲು ಹೆಚ್ಚುವರಿ ವಿದ್ಯುತ್ ದೀಪಗಳನ್ನು ಅಳವಡಿಸುವ ಮೂಲಕ ಸ್ಥಳವನ್ನು ಸುಂದರಗೊಳಿಸಬೇಕು. ಅನೈತಿಕ ಚಟುವಟಿಕೆಗಳನ್ನು ತಡೆಗಟ್ಟಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಹಿರಿಯ ಕನ್ನಡಪರ ಹೋರಾಟಗಾರರಿಗೆ ಗೌರವ ನೀಡಿ ಈ ಬಾರಿಯ ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ ಕನ್ನಡ ಭಾಷೆ, ನಾಡು–ನುಡಿಯ ಉಳಿವಿಗಾಗಿ ಶ್ರಮಿಸಿದ ಹಿರಿಯ ಕನ್ನಡಪರ ಹೋರಾಟಗಾರರನ್ನು ಗುರುತಿಸಿ ಗೌರವಿಸುವ ಕಾರ್ಯಕ್ರಮಗಳನ್ನು ಆಯೋಜಿಸಬೇಕು.

# ಮೋದಿ ಅವರು ಅನಧಿಕೃತ ತುರ್ತು ಪರಿಸ್ಥಿತಿಯನ್ನು ಹೇರುತ್ತಿದ್ದಾರೆ; ಅಭಿಜಿತ್ ದೀಪ್ಕೆ



**ನಾಗ್ಪುರ:** ನವದೆಹಲಿಯ ಜಂತರ್ ಮಂತರ್ ಪ್ರದೇಶಕ್ಕೆ ಅನಧಿಕೃತವಾಗಿ ಪ್ರವೇಶಿಸಿದ ಆರೋಪದ ಮೇಲೆ ಕಾಕ್ರೊಚ್ ಜನತಾ ಪಾರ್ಟಿಯ (ಸಿಜೆಪಿ) ಇಬ್ಬರು ನಾಯಕರನ್ನು ಐದು ದಿನಗಳ ನ್ಯಾಯಾಂಗ ಬಂಧನಕ್ಕೆ ಕಳುಹಿಸಿದ ಬೆನ್ನಲ್ಲೇ, ಪ್ರಧಾನಿ ನರೇಂದ್ರ ಮೋದಿ ಅವರು ದೇಶದಲ್ಲಿ ಅನಧಿಕೃತ ತುರ್ತು ಪರಿಸ್ಥಿತಿಯನ್ನು ಹೇರುತ್ತಿದ್ದಾರೆ ಎಂದು ಪಕ್ಷದ ಸ್ಥಾಪಕ ಅಭಿಜಿತ್ ದೀಪ್ಕೆ ಆರೋಪಿಸಿದ್ದಾರೆ.

ನಾಗ್ಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಂತರ್ ಮಂತರ್‌ನಲ್ಲಿ ತ್ರಿವರ್ಣ ಧ್ವಜ ಹಾರಿಸುವ ಮೂಲಕ ಸಿಜೆಪಿ ನಾಯಕರಾದ ಸೌರವ್ ದಾಸ್ ಮತ್ತು ಅಶುತೋಷ್ ರಂಕಾ ಯಾವ ಅಪರಾಧ ಎಸಗಿದ್ದಾರೆ ಎಂದು ಪ್ರಶ್ನಿಸಿದರು.

ಶಾಂತಿ ಒಪ್ಪಂದದ (ಪೀಸ್ ಬಾಂಡ್) ನಿಯಮಗಳನ್ನು ಉಲ್ಲಂಘಿಸಿದ ಹಾಗೂ ಪ್ರತಿಭಟನೆಗೆ ಅನುಮತಿಯಿಲ್ಲದ ಜಂತರ್ ಮಂತರ್ ಪ್ರದೇಶಕ್ಕೆ ಅನಧಿಕೃತವಾಗಿ ಪ್ರವೇಶಿಸಿದ ಆರೋಪದ ಮೇಲೆ ದಾಸ್ ಮತ್ತು ರಂಕಾ ಅವರನ್ನು ಐದು ದಿನಗಳ ನ್ಯಾಯಾಂಗ ಬಂಧನಕ್ಕೆ ಕಳುಹಿಸಿ, ದೆಹಲಿಯ ತಿಹಾರ್ ಜೈಲಿಗೆ ರವಾನಿಸಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಮುಖ್ಯ ಚುನಾವಣಾ ಆಯುಕ್ತ (ಸಿಇಸಿ) ಗ್ಯಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ಘೋಷಣೆಗಳನ್ನು ಕೂಗುತ್ತಾ, ಬ್ಯಾರಿಕೇಡ್‌ಗಳನ್ನು ದಾಟಿ ಅನುಮತಿಯಿಲ್ಲದೆ ಜಂತರ್ ಮಂತರ್ ಪ್ರದೇಶವನ್ನು ಪ್ರವೇಶಿಸಿದ ಆರೋಪದ ಮೇಲೆ ಅವರನ್ನು ನಿನ್ನೆ ಮುಂಜಾನೆ ವಶಕ್ಕೆ ಪಡೆಯಲಾಗಿತ್ತು.

ಈ ಬೆಳವಣಿಗೆಗೆ ಪ್ರತಿಕ್ರಿಯಿಸಿದ ದೀಪ್ಕೆ, ನರೇಂದ್ರ ಮೋದಿ ಅವರಿಗೆ ನಾನು ಹೇಳಲು ಬಯಸುವುದೇನೆಂದರೆ, ನೀವು ದೇಶದಲ್ಲಿ ತುರ್ತು ಪರಿಸ್ಥಿತಿಯನ್ನು ಹೇರಲು ಬಯಸಿದರೆ, ಅದನ್ನು ಅಧಿಕೃತವಾಗಿ ಘೋಷಿಸಿ. ಇದೇನು ಹೇಡಿಗಳಂತೆ ವರ್ತಿಸುವುದು ಜಂತರ್ ಮಂತರ್‌ನಲ್ಲಿ ರಾಷ್ಟ್ರಧ್ವಜ ಹಾರಿಸಿದ್ದಕ್ಕಾಗಿ ಜನರನ್ನು ಐದು ದಿನಗಳ ಕಾಲ ಬಂಧನದಲ್ಲಿರಿಸುವ ಮೂಲಕ ಅನಧಿಕೃತ ತುರ್ತು ಪರಿಸ್ಥಿತಿಯನ್ನು ಹೇರುತ್ತಿದ್ದೀರಾ 1975ರಲ್ಲಿ ಇಂದಿರಾ ಗಾಂಧಿ ತುರ್ತು ಪರಿಸ್ಥಿತಿ ಹೇರಿದ್ದಾಗಲೂ ಇಂತಹ ಘಟನೆ ನಡೆದಿರಲಿಲ್ಲ ಎಂದು ಹೇಳಿದರು.

ಈ ದೇಶದಲ್ಲಿ ತ್ರಿವರ್ಣ ಧ್ವಜ ಹಾರಿಸುವುದು ಅತಿ ದೊಡ್ಡ ಅಪರಾಧವಾಗಿ ಪರಿಣಮಿಸಿದೆ. ಅದಕ್ಕಾಗಿ ಜನರನ್ನು ಐದು ದಿನಗಳ ನ್ಯಾಯಾಂಗ ಬಂಧನಕ್ಕೆ ಕಳುಹಿಸಲಾಗುತ್ತಿದೆ. ನರೇಂದ್ರ ಮೋದಿ ಅವರಿಗೆ ನಾನು ಹೇಳುವುದೇನೆಂದರೆ, ಅಷ್ಟು ದೊಡ್ಡ ಹೇಡಿಯಾಗಬೇಡಿ; ಸ್ವಲ್ಪ ಧೈರ್ಯ ತೋರಿಸಿ. ನೀವು ತುರ್ತು ಪರಿಸ್ಥಿತಿ ಹೇರಲು ಬಯಸಿದರೆ ಮತ್ತು ನಿಮ್ಮಲ್ಲಿ ಧೈರ್ಯವಿದ್ದರೆ, ಅದನ್ನು ಅಧಿಕೃತವಾಗಿ ಘೋಷಿಸಿ ಎಂದು ಸವಾಲು ಹಾಕಿದರು. ಇದೇ ದಿನವಾದ 1956ರ ಅಕ್ಟೋಬರ್ 14ರಂದು ನಾಗ್ಪುರದಲ್ಲಿ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರು ತಮ್ಮ ಸಾವಿರಾರು ಅನುಯಾಯಿಗಳೊಂದಿಗೆ ಬೌದ್ಧ ಧರ್ಮವನ್ನು ಸ್ವೀಕರಿಸಿದ್ದರು.

ಇಂದು ನಾನು ಇಲ್ಲಿಯೇ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರಿಗೆ ಗೌರವ ಸಲ್ಲಿಸುತ್ತಿದ್ದೇನೆ. ನಮ್ಮ ದೇಶವು ಸಂವಿಧಾನ ಮತ್ತು ಅಂಬೇಡ್ಕರ್ ಅವರ ವಿಚಾರಧಾರೆಗಳ ಆಧಾರದ ಮೇಲೆ ನಡೆಯುತ್ತಿದೆ. ನರೇಂದ್ರ ಮೋದಿ ಅಥವಾ ಇನ್ಯಾರೇ ಆಗಲಿ, ದೇಶದ ಮೇಲೆ ಆರ್‌ಎಸ್‌ಎಸ್ ಸಿದ್ಧಾಂತವನ್ನು ಹೇರಲು ಎಷ್ಟೇ ಪ್ರಯತ್ನಿಸಿದರೂ ಅದು ಸಾಧ್ಯವಾಗುವುದಿಲ್ಲ ಎಂದು ಸಿಜೆಪಿ ಸ್ಥಾಪಕ ಅಭಿಜಿತ್ ದೀಪ್ಕೆ ದೃಢವಾಗಿ ಹೇಳಿದರು.

# ಚಿಂತಾಮಣಿಯಲ್ಲಿ ಮಹಿಳೆ ಮೇಲೆ ಮಾರಕಾಸ್ತ್ರದಿಂದ ಹಲ್ಲೆ: ಚಿಕಿತ್ಸೆ ಫಲಿಸದೆ ಸಾವು

**ಚಿಂತಾಮಣಿ:** ನವರಾತ್ರಿ ಉತ್ಸವ ವೀಕ್ಷಿಸಿ ಮಗಳೊಂದಿಗೆ ಮನೆಗೆ ತೆರಳುತ್ತಿದ್ದ ಮಹಿಳೆಯ ಮೇಲೆ ದುಷ್ಕರ್ಮಿಯೊಬ್ಬ ಮಾರಕಾಸ್ತ್ರದಿಂದ ಹಲ್ಲೆ ನಡೆಸಿದ್ದು, ತೀವ್ರವಾಗಿಗಾಯಗೊಂಡಿದ್ದ ಮಹಿಳೆ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ.

ನಗರದ ಫಿಲ್ಟರ್ ಬೆಡ್ ವೃತ್ತದ ಸಮೀಪದ ನಿವಾಸಿ ಸುಮಿತ್ರಮ್ಮ (35) ಮೃತಪಟ್ಟವರು. ನಗರದ ಸರ್ಕಾರಿ ಪಾಲಿಟೆಕ್ನಿಕ್ ಸಮೀಪ ನಡೆದ ನವರಾತ್ರಿ ಉತ್ಸವ ವೀಕ್ಷಿಸಿ, ತರಕಾರಿ ಖರೀದಿಸಿ ಕೊಂಡು ಮಗಳು ವಿಷ್ಣುಪ್ರಿಯಳೊಂದಿಗೆ ರಾತ್ರಿ ಸುಮಾರು 8 ಗಂಟೆಗೆ ಮನೆಗೆ ತೆರಳುತ್ತಿದ್ದಾಗ ಈ ಘಟನೆ ನಡೆದಿದೆ. ದ್ವಿಚಕ್ರ ವಾಹನದಲ್ಲಿ ಹಿಂಬಾಲಿಸಿಕೊಂಡು ಬಂದ ವ್ಯಕ್ತಿಯೊಬ್ಬ ಜನಸಂದಣಿ ಕಡಿಮೆ ಇದ್ದ ರಸ್ತೆಯಲ್ಲಿ ಅವರನ್ನು ಅಡ್ಡಗಟ್ಟಿ ಲಾಂಗ್‌ನಿಂದ ಹಲ್ಲೆ ನಡೆಸಿದ್ದಾನೆ ಎನ್ನಲಾಗಿದೆ.

ಹಲ್ಲೆಯಿಂದ ತೀವ್ರವಾಗಿ ಗಾಯಗೊಂಡ ಸುಮಿತ್ರಮ್ಮ ರಸ್ತೆಯಲ್ಲಿ ಕುಸಿದುಬಿದ್ದಿದ್ದು, ಮಗಳ ಕೂಗಾಟ ಕೇಳಿ ಸ್ಥಳಕ್ಕೆ ಧಾವಿಸಿದ ಸಾರ್ವಜನಿಕರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಬಳಿಕ ಗಾಯಾಳುವನ್ನು ಆಸ್ಪತ್ರೆಗೆ ಕರೆದೊಯ್ಯಲಾಗಿದ್ದು, ಪರೀಕ್ಷಿಸಿದ ವೈದ್ಯರು ಮೃತಪಟ್ಟಿರುವುದಾಗಿ ತಿಳಿಸಿದ್ದಾರೆ.

ಕೌಟುಂಬಿಕ ಹಿನ್ನೆಲೆ: ಸುಮಿತ್ರಮ್ಮ ಮತ್ತು ಅವರ ಮೊದಲ ಪತಿ ವೆಂಕಟರೆಡ್ಡಿ ನಡುವೆ ಕೌಟುಂ ಬಿಕ ಕಲಹ ಉಂಟಾಗಿದ್ದರಿಂದ ಇಬ್ಬರೂ ಪ್ರತ್ಯೇಕವಾಗಿ ವಾಸಿಸುತ್ತಿದ್ದರು. ವಿಚ್ಛೇದನಕ್ಕೆ ಸಂಬಂ ಧಿಸಿದ ಪ್ರಕರಣ ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿದೆ ಎನ್ನಲಾಗಿದೆ. ಸುಮಾರು ಒಂದು ವರ್ಷದ ಹಿಂದೆ ಸುಮಿತ್ರಮ್ಮ ಕಾಪಲ್ಲಿ ಗ್ರಾಮದ ರಮೇಶ್ ಎಂಬುವವರನ್ನು ಎರಡನೇ ಮದುವೆಯಾಗಿದ್ದರು.

ಆಸ್ಪತ್ರೆಗೆ ಬಂದಿದ್ದ ಎರಡನೇ ಪತಿ ರಮೇಶ್ ಮಾತನಾಡಿ, ಮೊದಲ ಪತಿಯಿಂದ ಪ್ರತ್ಯೇಕವಾಗಿದ್ದ ಸುಮಿತ್ರಮ್ಮ ಒಂಟಿಯಾಗಿ ಬದುಕುವುದು ಕಷ್ಟವೆಂದು ತಿಳಿಸಿದ್ದರಿಂದ ತಾನು ಮದುವೆಯಾಗಿದ್ದೆ. ತನಗೆ ಯಾರ ಮೇಲೆಯೂ ಅನುಮಾನವಿಲ್ಲ. ಆದರೆ ಮೊದಲ ಪತಿ ವೆಂಕಟರೆಡ್ಡಿ ಮೇಲೆ ಮಗಳು ಅನುಮಾನ ವ್ಯಕ್ತಪಡಿಸುತ್ತಿದ್ದಾಳೆ ಎಂದು ತಿಳಿಸಿದ್ದಾರೆ.

ಘಟನಾ ಸ್ಥಳ ಹಾಗೂ ಆಸ್ಪತ್ರೆಗೆ ಡಿವೈಎಸ್ಪಿ ರಘು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಪೊಲೀಸರು ಪ್ರಕರಣದ ಕುರಿತು ಮುಂದಿನ ತನಿಖೆ ಕೈಗೊಂಡಿ–ದ್ದಾರೆ.

## ಮೋದಿ-ಕೆನಡಾ ಪ್ರಧಾನಿ ಮಾರ್ಕ್ ಕಾರ್ನಿ ಮಾತುಕತೆ

# ವ್ಯಾಪಾರ, ಇಂಧನ, ತಂತ್ರಜ್ಞಾನ ಸಹಕಾರಕ್ಕೆ ಒತ್ತು



**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ಅವರು ಕೆನಡಾದ ಪ್ರಧಾನಿ ಮಾರ್ಕ್ ಕಾರ್ನಿ ಅವರೊಂದಿಗೆ ಸೌಹಾರ್ದಯುತ ಮತ್ತು ಫಲಪ್ರದ ಮಾತುಕತೆ ನಡೆಸಿದ್ದು, ಉಭಯ ದೇಶಗಳ ನಡುವಿನ ದ್ವಿಪಕ್ಷೀಯ ಸಂಬಂಧಗಳಲ್ಲಿನ ಸಕಾರಾತ್ಮಕ ವೇಗವನ್ನು ಮತ್ತಷ್ಟು ಬಲಪಡಿಸಲು ಒಪ್ಪಿಕೊಂಡಿದ್ದಾರೆ. ಭಾರತ ಮತ್ತು ಕೆನಡಾ ಒಟ್ಟಾಗಿ ಹೆಚ್ಚು ಸ್ಥಿರ ಹಾಗೂ ಸಮೃದ್ಧ ಜಗತ್ತನ್ನು ನಿರ್ಮಿಸಲು ಕೊಡುಗೆ ನೀಡುತ್ತಿವೆ ಎಂದು ಮೋದಿ ಅವರು ಎಕ್ಸ್‌ನಲ್ಲಿ ತಿಳಿಸಿದ್ದಾರೆ.

ಕೆನಡಾದ ಪ್ರಧಾನಿ ಮಾರ್ಕ್ ಕಾರ್ನಿ ಅವರೊಂದಿಗೆ ಸೌಹಾರ್ದಯುತ ಮತ್ತು ಫಲಪ್ರದ ಮಾತುಕತೆ ನಡೆಸಿದೆ. ಭಾರತ–ಕೆನಡಾ ಸಂಬಂಧಗಳಲ್ಲಿನ ಸಕಾರಾತ್ಮಕ ವೇಗವನ್ನು ಮುಂದುವರಿಸಲು ಹಾಗೂ ವ್ಯಾಪಾರ, ಇಂಧನ, ತಂತ್ರಜ್ಞಾನ, ಭದ್ರತೆ ಮತ್ತು ಜನರ ನಡುವಿನ ಸಂಪರ್ಕ ಸೇರಿದಂತೆ ನಮ್ಮ ಕಾರ್ಯತಂತ್ರದ ಪಾಲುದಾರಿಕೆಯ ಪ್ರಮುಖ ಕ್ಷೇತ್ರಗಳಲ್ಲಿ ಸ್ಪಷ್ಟ ಫಲಿತಾಂಶಗಳನ್ನು ಸಾಧಿಸಲು ನಾವು ಒಪ್ಪಿಕೊಂಡಿದ್ದೇವೆ ಎಂದು ಅವರು ಹೇಳಿದ್ದಾರೆ.

ಕೆನಡಾದ ಪ್ರಧಾನಿ ಕಚೇರಿ ಬಿಡುಗಡೆ ಮಾಡಿದ ಹೇಳಿಕೆಯ ಪ್ರಕಾರ, 2030ರ ವೇಳೆಗೆ ದ್ವಿಪಕ್ಷೀಯ ವ್ಯಾಪಾರವನ್ನು ದ್ವಿಗುಣಗೊಳಿಸುವ ಪ್ರಯತ್ನಗಳಿಗೆ ಬೆಂಬಲವಾಗಿ ಸಮಗ್ರ ಆರ್ಥಿಕ ಪಾಲುದಾರಿಕೆ ಒಪ್ಪಂದದ ಕುರಿತ ಮಾತುಕತೆಗಳನ್ನು ಆದಷ್ಟು ಬೇಗ ಪೂರ್ಣಗೊಳಿಸುವ ಬದ್ಧತೆಯನ್ನು ಉಭಯ ನಾಯಕರು ಪುನರುಚ್ಚರಿಸಿದ್ದಾರೆ. ಅಂತರಾಷ್ಟ್ರೀಯ ವ್ಯಾಪಾರ ಸಚಿವ ಮನಿಂದರ್ ಸಿಧು ಅವರ ನೇತೃತ್ವದಲ್ಲಿ ಭಾರತದಲ್ಲಿ ನಡೆಯುತ್ತಿರುವ ಕೆನಡಾದ ವ್ಯಾಪಾರ ನಿಯೋಗದ ಭೇಟಿಯನ್ನು ಉಭಯ ನಾಯಕರು ಸ್ವಾಗತಿಸಿದ್ದಾರೆ. ಅಲ್ಲದೆ, ವ್ಯಾಪಾರ, ಇಂಧನ ಮತ್ತು ಜನರ ನಡುವಿನ ಸಂಪರ್ಕ ಸೇರಿದಂತೆ ಪರಸ್ಪರ ಆದ್ಯತೆಯ ಕ್ಷೇತ್ರಗಳಲ್ಲಿ ಸಹಕಾರವನ್ನು ಮುಂದುವರಿಸಲು ವಿದೇಶಾಂಗ ವ್ಯವಹಾರಗಳ ಸಚಿವೆ ಅನಿತಾ ಆನಂದ್ ಅವರು ಈ ವಾರ ನವದೆಹಲಿಗೆ ಭೇಟಿ ನೀಡುತ್ತಿರುವುದನ್ನೂ ಸ್ವಾಗತಿಸಿದ್ದಾರೆ ಎಂದು ಕೆನಡಾದ ಪ್ರಧಾನಿ ಕಚೇರಿ ತಿಳಿಸಿದೆ.

ಇಂಡೋ–ಪೆಸಿಫಿಕ್ ಪ್ರದೇಶದ ಮೇಲೆ ಭೌಗೋಳಿಕ ರಾಜಕೀಯ ಅಸ್ಥಿರತೆಯ ಪರಿಣಾಮಗಳು ಹಾಗೂ ಇಂಧನ ಮತ್ತು ಕೃಷಿ ಕ್ಷೇತ್ರಗಳಲ್ಲಿ ವಿಶ್ವಾಸಾರ್ಹ ಪಾಲುದಾರರ ಅಗತ್ಯದ ಬಗ್ಗೆಯೂ ಉಭಯ ನಾಯಕರು ಚರ್ಚಿಸಿದ್ದಾರೆ. ಉಕ್ರೇನ್ ವಿರುದ್ಧ ರಷ್ಯಾ ನಡೆಸುತ್ತಿರುವ ಯುದ್ಧಕ್ಕೆ ಶಾಂತಿಯುತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ವಹಿಸಿದ ನಾಯಕತ್ವಕ್ಕಾಗಿ ಕಾರ್ನಿ ಅವರು ಪ್ರಧಾನಿ ಮೋದಿಯವರಿಗೆ ಧನ್ಯವಾದ ಅರ್ಪಿಸಿದ್ದಾರೆ.

ಕಳೆದ ವಾರ ಭಾರತದಲ್ಲಿ ರಾಷ್ಟ್ರೀಯ ಭದ್ರತಾ ಸಲಹೆಗಾರರ ಮಟ್ಟದಲ್ಲಿ ನಡೆದ ದ್ವಿಪಕ್ಷೀಯ ಭದ್ರತಾ ಸಂವಾದವನ್ನೂ ಉಭಯ ಪ್ರಧಾನಿಗಳು ಸ್ವಾಗತಿಸಿದ್ದಾರೆ. ಡಿಸೆಂಬರ್‌ನಲ್ಲಿ ಮೋದಿ ಅವರು ಕೆನಡಾಕ್ಕೆ ಭೇಟಿ ನೀಡುವ ಮುನ್ನ ನಿಕಟ ಸಂಪರ್ಕದಲ್ಲಿರಲು ನಾಯಕರು ಒಪ್ಪಿಕೊಂಡಿದ್ದಾರೆ.

ಕೆನಡಾದ ಪ್ರಧಾನಿ ಕಚೇರಿಯ ಹಿರಿಯ ರಾಜತಾಂತ್ರಿಕ ಮತ್ತು ಅಂತರರಾಷ್ಟ್ರೀಯ ವ್ಯವಹಾರಗಳ ಸಲಹೆಗಾರ ಡೇವಿಡ್ ಮಾರಿಸನ್ ಅವರು ಭಾರತಕ್ಕೆ ಭೇಟಿ ನೀಡಿದ ಕೆಲವೇ ದಿನಗಳಲ್ಲಿ ಈ ದೂರವಾಣಿ ಮಾತುಕತೆ ನಡೆದಿದೆ.

## ಕಾಂಗೋದಲ್ಲಿ ಸಾವಿನ ಕೇಕೆ

# ಎಬೋಲ ಸೋಂಕಿಗೆ 4,300ಕ್ಕೂ ಹೆಚ್ಚು ಮಂದಿ ಬಲಿ; ನಿಯಂತ್ರಣಕ್ಕೆ ಆರೋಗ್ಯ ಅಧಿಕಾರಿಗಳ ಹರಸಾಹಸ



**ಬುನಿಯಾ:** ಕಾಂಗೋದಲ್ಲಿ ಎಬೋಲಾ ಸೋಂಕಿನ ಪ್ರಕರಣಗಳ ಸಂಖ್ಯೆ 9,000 ದಾಟಿದ್ದು, 4,300ಕ್ಕೂ ಹೆಚ್ಚು ಮಂದಿ ಮೃತಪಟ್ಟಿದ್ದಾರೆ. ಏಳು ಪ್ರಾಂತ್ಯಗಳಲ್ಲಿ ಸೋಂಕು ಹರಡುತ್ತಿದ್ದು, ಅದನ್ನು ನಿಯಂತ್ರಿಸಲು ಆರೋಗ್ಯ ಅಧಿಕಾರಿಗಳು ಹರಸಾಹಸ ಪಡುತ್ತಿದ್ದಾರೆ ಎಂದು ಸರ್ಕಾರದ ಅಂಕಿ ಅಂಶಗಳು ತಿಳಿಸಿವೆ.

ಆರೋಗ್ಯ ಸಚಿವಾಲಯವು 9,066 ದೃಢಪಟ್ಟ ಪ್ರಕರಣಗಳು ಮತ್ತು 4,381 ಸಾವುಗಳನ್ನು ವರದಿ ಮಾಡಿದೆ. ಸಾವಿನ ಸಂಖ್ಯೆ ದೃಢಪಟ್ಟ ಪ್ರಕರಣಗಳ ಅರ್ಧದಷ್ಟಿದ್ದು, ಹೆಚ್ಚುತ್ತಿರುವ ಸಾವಿನ ಪ್ರಮಾಣ ಆರೋಗ್ಯ ಕಾರ್ಯಕರ್ತರು ಮತ್ತು ಅಧಿಕಾರಿಗಳಲ್ಲಿ ಆತಂಕ ಮೂಡಿಸಿದೆ. ದಾಖಲಾದ ಹೆಚ್ಚಿನ ಸಾವುಗಳು ಚಿಕಿತ್ಸಾ ಕೇಂದ್ರಗಳ ಹೊರಗೆ ಸಂಭವಿಸಿರುವುದು ಕಳವಳಕ್ಕೆ ಕಾರಣವಾಗಿದೆ.

ಇತ್ತೀಚಿನ ವರದಿಯಲ್ಲಿ 88 ಹೊಸ ಪ್ರಕರಣಗಳು ದಾಖಲಾಗಿವೆ. ಸಮುದಾಯದೊಳಗೆ ಸೋಂಕು ಹರಡುವಿಕೆ ಮುಂದುವರಿದಿರುವುದು ಇನ್ನೂ ಗಂಭೀರ ಕಳವಳದ ವಿಷಯವಾಗಿದೆ ಎಂದು ಅಧಿಕಾರಿಗಳು ಎಚ್ಚರಿಸಿದ್ದಾರೆ.

ಸೋಂಕು ಮತ್ತಷ್ಟು ಸಮುದಾಯಗಳಿಗೆ ಹರಡುತ್ತಿರುವುದರಿಂದ ಹೊಸ ಸೋಂಕು ಕೇಂದ್ರಗಳು ಕಾಣಿಸಿಕೊಳ್ಳುತ್ತಿವೆ. ಪ್ರಸ್ತುತ ಏಳು ಪ್ರಾಂತ್ಯಗಳ 65 ಆರೋಗ್ಯ ವಲಯಗಳು ಸೋಂಕಿನಿಂದ ಬಾಧಿತವಾಗಿವೆ. ದೃಢಪಟ್ಟ ಪ್ರಕರಣಗಳು ಒಟ್ಟು ಪ್ರಕರಣಗಳ ಮೂರನೇ ಒಂದು ಭಾಗದಷ್ಟು ಮಾತ್ರವಾಗಿದ್ದು, ಹಲವು ಪ್ರಕರಣಗಳು ಪತ್ತೆಯಾಗದೆ ಉಳಿದಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಈ ಸೋಂಕಿಗೆ ಅಪರೂಪದ ಬುಂಡಿಬುಗ್ಯೊ ವೈರಸ್ ಕಾರಣವಾಗಿದೆ. ಇದಕ್ಕೆ ನಿರ್ದಿಷ್ಟವಾಗಿ ಅನುಮೋದಿತ ಲಸಿಕೆ ಅಥವಾ ಚಿಕಿತ್ಸೆ ಲಭ್ಯವಿಲ್ಲ ಎಂದು ವರದಿಯಲ್ಲಿ ತಿಳಿಸಲಾಗಿದೆ. ವೈರಸ್ ನಿಯಂತ್ರಣದ ಪ್ರಯತ್ನಗಳಿಗೆ ಹಲವು ಅಂಶಗಳು ಅಡ್ಡಿಯಾಗಿವೆ. ಸರ್ಕಾರಿ ಪಡೆಗಳು ಮತ್ತು ಬಂಡಾಯ ಗುಂಪುಗಳ ನಡುವಿನ ಸಂಘರ್ಷ, ಆರೋಗ್ಯ ಮುನ್ನೆಚ್ಚರಿಕೆಗಳ ಬಗ್ಗೆ ಜನರ ನಿರ್ಲಕ್ಷ್ಯ, ಜನರ ನಿರಂತರ ಓಡಾಟ ಹಾಗೂ ವೈದ್ಯಕೀಯ ಸಾಮಗ್ರಿಗಳು ಮತ್ತು ಚಿಕಿತ್ಸಾ ಕೇಂದ್ರಗಳ ಕೊರತೆ ಪ್ರಮುಖ ಸವಾಲುಗಳಾಗಿವೆ. ಈ ಸಂಘರ್ಷವು ವಿಶ್ವದ ಅತ್ಯಂತ ಗಂಭೀರ ಮಾನವೀಯ ಬಿಕ್ಕಟ್ಟುಗಳಲ್ಲಿ ಒಂದಕ್ಕೆ ಕಾರಣವಾಗಿದೆ. ಕಾಂಗೋದಲ್ಲಿ ಈ ಹಿಂದೆ ಸಂಭವಿಸಿದ 16 ಎಬೋಲಾ ಸೋಂಕಿನ ಏಕಾಏಕಿ ಹರಡುವಿಕೆಗಳಿಗಿಂತಲೂ ಪ್ರಸ್ತುತ ಪರಿಸ್ಥಿತಿ ಗಂಭೀರವಾಗಿದೆ. ಅಲ್ಲದೆ, 2014ರಿಂದ 2016ರವರೆಗೆ ಪಶ್ಚಿಮ ಆಫ್ರಿಕಾದಲ್ಲಿ 11,000ಕ್ಕೂ ಹೆಚ್ಚು ಜನರ ಸಾವಿಗೆ ಕಾರಣವಾದ ಎಬೋಲಾ ಸಾಂಕ್ರಾಮಿಕದ ಮಟ್ಟವನ್ನು ತಲುಪುವ ಆತಂಕವೂ ವ್ಯಕ್ತವಾಗಿದೆ.

ಸರ್ಕಾರವು ಪ್ರಸ್ತುತ ಪರಿಸ್ಥಿತಿಯಿಂದ ತೀವ್ರ ಒತ್ತಡಕ್ಕೆ ಸಿಲುಕಿದೆ ಎಂದು ನನಗನಿಸುತ್ತದೆ. ಎಬೋಲಾ ವಿರುದ್ಧದ ಹೋರಾಟ ಪರಿಣಾಮಕಾರಿಯಾಗಿರುವುದನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ತನ್ನ ಜವಾಬ್ದಾರಿಗಳನ್ನು ಸಂಪೂರ್ಣವಾಗಿ ನಿರ್ವಹಿಸಬೇಕು" ಎಂದು ಸೋಂಕು ತೀವ್ರವಾಗಿ ಬಾಧಿಸಿರುವ ಇಟುರಿ ಪ್ರಾಂತ್ಯದ ರಾಜಧಾನಿ ಬುನಿಯಾದ ನಿವಾಸಿ ಸ್ಯಾಮ್ಯುಯೆಲ್ ಬುಜು ಹೇಳಿದರು.

ಕಳೆದ ವಾರ ಕಾಂಗೋದಿಂದ ಬಂದ ಎಬೋಲಾ ಪ್ರಕರಣವನ್ನು ವರದಿ ಮಾಡಿದ ಉಗಾಂಡಾದ ಬಳಿಕ, ಕೀನ್ಯಾ ಕೂಡ ಇಂತಹ ಪ್ರಕರಣವನ್ನು ವರದಿ ಮಾಡಿದ ಎರಡನೇ ದೇಶವಾಗಿದೆ. ಇದರಿಂದ ಗಡಿಯಾಚೆಗೂ ವೈರಸ್ ಹರಡುವ ಆತಂಕ ಹೆಚ್ಚಾಗಿದೆ.

# ಕಾರಿನಲ್ಲಿ ಅಡಗಿಸಿಟ್ಟು ಸಾಗಿಸುತ್ತಿದ್ದ 2 ಕೋಟಿ ಮೌಲ್ಯದ ಡ್ರಗ್ಸ್ ವಶ




**ಗುವಾಹಟಿ:** ಅಸ್ಸಾಂನ ಕೊಕ್ರಜಾರ್ ಜಿಲ್ಲೆಯಲ್ಲಿ ಸುಮಾರು 2 ಕೋಟಿ ರೂ. ಮೌಲ್ಯದ ಮಾದಕವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದ್ದು,

ಓರ್ವ ವ್ಯಕ್ತಿಯನ್ನು ಬಂಧಿಸಲಾಗಿದೆ ಎಂದು ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ತಿಳಿಸಿದ್ದಾರೆ.

ವಾಹನವೊಂದರಲ್ಲಿ ವಿಶೇಷವಾಗಿ ನಿರ್ಮಿಸಲಾಗಿದ್ದ ರಹಸ್ಯ ಕೋಣೆಗಳಿಂದ 27.3 ಕೆ.ಜಿ. ಶಂಕಿತ ಅಫೀಮನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ ಎಂದು ಶರ್ಮಾ ಅವರು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಈ ಕಾರ್ಯಾಚರಣೆಯಲ್ಲಿ ಸುಮಾರು 2 ಕೋಟಿ ರೂ. ಮೌಲ್ಯದ ಮಾದಕವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಓರ್ವ ವ್ಯಕ್ತಿಯನ್ನು ಬಂಧಿಸಲಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

ಕಾರ್ಯಾಚರಣೆಯನ್ನು ಯಶಸ್ವಿಯಾಗಿ ನಡೆಸಿದ ಪೊಲೀಸರನ್ನು ಶರ್ಮಾ ಶ್ಲಾಘಿಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಅಗತ್ಯ ಕಾನೂನು ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

# ಸ್ಟಿಂಗ್ ಆಪರೇಷನ್ ವಿಚಾರ: ಕುಮಾರಸ್ವಾಮಿಗೆ ಸಚಿವ ಚಲುವರಾಯಸ್ವಾಮಿ ಸವಾಲು





**ಬೆಂಗಳೂರು:** ಕೇಂದ್ರದಲ್ಲಿ ಎನ್‌ಡಿಎ ಸರ್ಕಾರ ಅಧಿಕಾರದಲ್ಲಿದ್ದು, ಸ್ಟಿಂಗ್ ಆಪರೇಷನ್ ವಿಚಾರವನ್ನು ಸಿಬಿಐ ತನಿಖೆಗೆ ವಹಿಸುವಂತೆ ಜಲಸಂಪನ್ಮೂಲ ಸಚಿವ ಎನ್. ಚಲುವರಾಯಸ್ವಾಮಿ ಅವರು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರಿಗೆ ಸವಾಲು ಹಾಕಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರದಲ್ಲಿ ಅವರದೇ ಸರ್ಕಾರವಿದೆ. ಬೇಕಿದ್ದರೆ ತನಿಖೆ ಮಾಡಿಸಲಿ. ಇಂದು ಸಚಿವ ಸಂಪುಟ ಸಭೆ ನಡೆಯಲಿದ್ದು,

ಅಲ್ಲಿ ಏನು ಚರ್ಚೆಯಾಗುತ್ತದೆ ಎಂಬುದನ್ನು ಕಾದು ನೋಡೋಣ. ಈ ವಿಚಾರದಲ್ಲಿ ತನಿಖೆಯ ಅಗತ್ಯವಿಲ್ಲ ಎನಿಸುತ್ತದೆ. ಆದ–ರೆ, ಮುಖ್ಯಮಂತ್ರಿ ಈ ಬಗ್ಗೆ ಸೂಕ್ತ ನಿರ್ಧಾರ ಕೈಗೊಳ್ಳಲಿದ್ದಾರೆ ಎಂದರು.

ಸಿದ್ದರಾಮಯ್ಯ ಅವರ ನಾಯಕತ್ವ ಮತ್ತು ಅವರು ಬೆಳೆದು ಬಂದ ಹಾದಿ ನಾಡಿನ ಜನರಿಗೆ ತಿಳಿದಿದೆ. ಅವರು ಮುಖ್ಯಮಂತ್ರಿಯಾದಾಗ ಪ್ರಸ್ತಾಪವಾಗದ ವಿಚಾರ ಈಗ ಏಕೆ ಮುನ್ನೆಲೆಗೆ ಬಂದಿದೆ? ನಮ್ಮ ಪಕ್ಷದಲ್ಲಿ ಒಡಕು ಮೂಡಿಸಲು ಕೇಂದ್ರ ಸಚಿವ ಕುಮಾರಸ್ವಾಮಿ ಪ್ರಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದರು.

ಕುಮಾರಸ್ವಾಮಿ ಅವರು ರಾಜ್ಯದ ಸಮಸ್ಯೆಗಳ ಬಗ್ಗೆ ಮಾತನಾಡಲಿ. ನಮಗೆ ಸಲಹೆಗಳನ್ನು ನೀಡಲಿ, ರೈತರ ಸಮಸ್ಯೆಗಳನ್ನು ನಮ್ಮ ಗಮನಕ್ಕೆ ತರಲಿ. ಸ್ಟಿಂಗ್ ಆಪರೇಷನ್ ವಿಚಾರ ಜನರಿಗೆ ಬೇಕಿದೆಯೇ? ಅಗತ್ಯವಿದ್ದರೆ ಈ ಬಗ್ಗೆ ತನಿಖೆ ನಡೆಸಲಾಗುವುದು ಎಂದು ಹೇಳಿದರು.

ಸಿಬಿಐ ಅಥವಾ ಸಿಐಡಿ ಸೇರಿದಂತೆ ಯಾವುದಾದರೂ ತನಿಖಾ ಸಂಸ್ಥೆಯಿಂದ ತನಿಖೆ ನಡೆಯಬಹುದು. ಕುಮಾರಸ್ವಾಮಿ ಅವರಿಗೆ ಅಧಿಕಾರ ಬೇಕಿದೆ. ಅದಕ್ಕಾಗಿ ಈ ರೀತಿಯ ಆರೋಪಗಳನ್ನು ಮಾಡುತ್ತಿದ್ದಾರೆ ಎಂದು ಚಲುವರಾಯಸ್ವಾಮಿ ದೂರಿದರು.

# ಬರಪೀಡಿತ ತಾಲೂಕುಗಳ ಸಂಖ್ಯೆ 226ಕ್ಕೆ ಏರಿಕೆ; ವಾರದೊಳಗೆ ಪರಿಹಾರ ಕೋರಿ ಮನವಿ: ಡಿಸಿಎಂ



ಕರ್ನಾಟಕದಲ್ಲಿ ಇನ್ನೂ 9 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗುವುದು. ಇದರಿಂದ ರಾಜ್ಯದಲ್ಲಿ ಬರಪೀಡಿತ ತಾಲೂಕುಗಳ ಸಂಖ್ಯೆ 226ಕ್ಕೆ ಏರಿಕೆಯಾಗಲಿದೆ ಎಂದು ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ.

ಈ ತಾಲೂಕುಗಳಲ್ಲಿ ಸ್ಥಳ ಪರಿಶೀಲನೆ ಪೂರ್ಣಗೊಂಡಿದೆ. ಉಳಿದ ತಾಲೂಕುಗಳು ನಿಗದಿತ ಮಾನದಂಡಗಳನ್ನು ಪೂರೈಸುತ್ತವೆಯೇ ಎಂಬುದನ್ನು ಪರಿಶೀಲಿಸಲಾಗುತ್ತಿದೆ ಎಂದು ಹೇಳಿದರು.

ಉಳಿದ ತಾಲೂಕುಗಳ ಪೈಕಿ ಯಾವುದಾದರೂ ನಿಗದಿತ ಮಾನದಂಡಗಳನ್ನು ಪೂರೈಸಿದರೆ, ಆ ತಾಲೂಕುಗಳಲ್ಲೂ ಸ್ಥಳ ಪರಿಶೀಲನೆ ನಡೆಸಲು ಕ್ರಮ ಕೈಗೊಳ್ಳುತ್ತೇವೆ ಎಂದು ತಿಳಿಸಿದರು. ಕರ್ನಾಟಕಕ್ಕೆ ಉಂಟಾಗಿರುವ ನಷ್ಟದ ವಿವರಗಳನ್ನು ಒಳಗೊಂಡ ಅಂತಿಮ ಮನವಿಯನ್ನು ರಾಜ್ಯ ಸರ್ಕಾರ ಸಿದ್ಧಪಡಿಸುತ್ತಿದ್ದು,

ಒಂದು ವಾರದೊಳಗೆ ಅದು ಪೂರ್ಣಗೊಳ್ಳುವ ನಿರೀಕ್ಷೆಯಿದೆ ಎಂದು ಅವರು ಹೇಳಿದರು.

ಕರ್ನಾಟಕಕ್ಕೆ ಉಂಟಾಗಿರುವ ಒಟ್ಟು ನಷ್ಟದ ಅಂದಾಜು ದೊರೆತ ಬಳಿಕ,

ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯಾ ನಿಧಿ ಮಾರ್ಗಸೂಚಿಗಳಡಿ ಎಷ್ಟು ಆರ್ಥಿಕ ನೆರವು ಕೋರಬಹುದು ಎಂಬುದನ್ನು ನಿರ್ಧರಿಸುತ್ತೇವೆ ಎಂದು ತಿಳಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ, ತಾವು ಹಾಗೂ ಇತರ ಅಧಿಕಾರಿಗಳು ದೆಹಲಿಗೆ ತೆರಳಿ ಮನವಿಯನ್ನು ಖುದ್ದಾಗಿ ಸಲ್ಲಿಸುವ ನಿಯೋಗದ ಸದಸ್ಯರನ್ನು ಅಂತಿಮಗೊಳಿಸಲಿದ್ದಾರೆ ಎಂದು ಪರಮೇಶ್ವರ್ ಹೇಳಿದರು.

ಬರದಿಂದ ಉಂಟಾಗಿರುವ ನಷ್ಟವನ್ನು ನಿಭಾಯಿಸಲು ಕರ್ನಾಟಕಕ್ಕೆ ಅಗತ್ಯವಾದ ಆರ್ಥಿಕ ನೆರವು ಬಿಡುಗಡೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

# ತಾರಕಕ್ಕೇರಿದ ಸ್ಟಿಂಗ್ ಆಪರೇಷನ್ ವಿವಾದ: ಸಿಬಿಐ ತನಿಖೆಗೆ ವಹಿಸುವಂತೆ ಹೆಚ್‌ಡಿಕೆ ಆಗ್ರಹ



**ಬೆಂಗಳೂರು:** ಕರ್ನಾಟಕದಲ್ಲಿ ಸ್ಟಿಂಗ್ ಆಪರೇಷನ್ ಆರೋಪದ ಸುತ್ತ ನಡೆಯುತ್ತಿರುವ ರಾಜಕೀಯ ಬೆಳವಣಿಗೆಗಳು ರಾಜ್ಯದ ರಾಜಕೀಯ ಸಂಸ್ಕೃತಿಯನ್ನು ಕಲುಷಿತಗೊಳಿಸುತ್ತಿವೆ ಎಂದು ಆರೋಪಿಸಿರುವ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು, ಪ್ರಕರಣದ ಕುರಿತು ಪಾರದರ್ಶಕ ತನಿಖೆ ನಡೆಸಿ ಸತ್ಯಾಂಶವನ್ನು ಬಹಿರಂಗಪಡಿಸಬೇಕು. ಇದಕ್ಕಾಗಿ ಪ್ರಕರಣವನ್ನು ಕೇಂದ್ರ ತನಿಖಾ ದಳಕ್ಕೆ (ಸಿಬಿಐ) ವಹಿಸಬೇಕು ಎಂದು ಆಗ್ರಹಿಸಿದ್ದಾರೆ.

ಪಕ್ಷದ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜ್ಯದಲ್ಲಿ ಬರಗಾಲ, ಕಬ್ಬಿನ ಬೆಲೆ, ರೈತರ ಸಮಸ್ಯೆಗಳು, ಬಿಡದಿ ಟೌನ್‌ಶಿಪ್ ಮತ್ತು ನೈಸ್ ಯೋಜನೆ ಸೇರಿದಂತೆ ಹಲವು ಪ್ರಮುಖ ವಿಚಾರಗಳಿದ್ದರೂ, ಅವುಗಳನ್ನೆಲ್ಲ ಹಿಂದಿಕ್ಕಿ ಸ್ಟಿಂಗ್ ಆಪರೇಷನ್ ವಿವಾದವೇ ರಾಜಕೀಯ ಚರ್ಚೆಯ ಕೇಂದ್ರಬಿಂದುವಾಗಿದೆ ಎಂದು ಟೀಕಿಸಿದರು.ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಸಂಬಂಧಿಸಿದ ಸ್ಟಿಂಗ್ ಆಪರೇಷನ್ ವಿಚಾರವನ್ನು ಪ್ರಸ್ತಾಪಿಸಿದ ಕುಮಾರಸ್ವಾಮಿ, ಈ ಕಾರ್ಯಾಚರಣೆಯ ಹಿಂದೆ ಯಾರಿದ್ದಾರೆ, ಅದನ್ನು ಯಾರು ನಡೆಸಿದ್ದಾರೆ ಮತ್ತು ಅದರ ಉದ್ದೇಶವೇನು ಎಂಬುದನ್ನು ತನಿಖೆಯಿಂದ ಪತ್ತೆಹಚ್ಚಬೇಕು.ಸ್ಟಿಂಗ್ ಆಪರೇಷನ್ ನಡೆಸಿದ ವ್ಯಕ್ತಿ ಯಾರು ಎಂಬುದು ಸೇರಿದಂತೆ ಪ್ರಕರಣಕ್ಕೆ ಸಂಬಂಧಿಸಿದ ಸಂಪೂರ್ಣ ಮಾಹಿತಿ ಹೊರಬರಬೇಕು. ಈ ವಿಚಾರದಲ್ಲಿ ತಮಗೆ ನೇರ ಮಾಹಿತಿ ಇಲ್ಲದ ಕಾರಣ ತನಿಖೆಗೆ ಆಗ್ರಹಿಸುತ್ತಿದ್ದೇನೆ ಎಂದು ಸ್ಪಷ್ಟಪಡಿಸಿದರು.

ನನ್ನ ಬಳಿ ಪೊಲೀಸ್ ವ್ಯವಸ್ಥೆ ಇಲ್ಲ. ಸ್ಟಿಂಗ್ ಆಪರೇಷನ್ ಯಾರು ಮಾಡಿಸಿದ್ದಾರೆ ಎಂಬುದನ್ನು ಪತ್ತೆಹಚ್ಚಲು ತನಿಖೆ ನಡೆಸಿ ಎಂದು ಹೇಳುತ್ತಿದ್ದೇನೆ. ಮುಖ್ಯಮಂತ್ರಿಯವರು ತಾವು ಸರಿಯಾದ ಕೆಲಸ ಮಾಡುತ್ತಿದ್ದೇವೆ ಎಂದು ಭಾವಿಸಿದ್ದರೆ ತನಿಖೆಗೆ ಅವಕಾಶ ನೀಡಲಿ. ಎಲ್ಲವೂ ಹೊರಬರಲಿ.ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ತಾವು ಯಾರಿಗೂ ಗೂಢಚರ್ಯೆ ನಡೆಸುವಂತೆ ಸೂಚಿಸಿರಲಿಲ್ಲ ಎಂದ ಅವರು, ಪ್ರಸ್ತುತ ಇಂತಹ ಚಟುವಟಿಕೆಗಳು ನಡೆಯುತ್ತಿವೆಯೇ ಎಂಬುದನ್ನು ಪರಿಶೀಲಿಸಬೇಕಿದೆ ಎಂದು ಹೇಳಿದರು.

ರಾಜ್ಯದ ಮುಖ್ಯಮಂತ್ರಿ ದೆಹಲಿಗೆ ತೆರಳಿ ಕೇಂದ್ರ ಸಚಿವರೊಂದಿಗೆ ರೈತರ ಸಮಸ್ಯೆಗಳ ಕುರಿತು ಚರ್ಚಿಸುತ್ತಿರುವ ಸಂದರ್ಭದಲ್ಲಿ, ರಾಜ್ಯದ ರಾಜಕೀಯ ವಾತಾವರಣದಲ್ಲಿ ಇಂತಹ ವಿವಾದಗಳು ಮುನ್ನೆಲೆಗೆ ಬಂದಿರುವುದು ದುರದೃಷ್ಟಕರ. ರಾಜ್ಯದಲ್ಲಿ ಕೆಟ್ಟ ರಾಜಕೀಯ ಸಂಸ್ಕೃತಿ ಬೆಳೆಯುತ್ತಿದೆ. ರಾಜ್ಯದಲ್ಲಿ ನಡೆಯುತ್ತಿರುವ ಬೆಳವಣಿಗೆಗಳು ಅತ್ಯಂತ ಕೆಟ್ಟ ರಾಜಕೀಯ ಸಂಸ್ಕೃತಿಗೆ ನಾಂದಿ ಹಾಡುತ್ತಿವೆ. ರಾಜ್ಯದ ರಾಜಕೀಯ ವಾತಾವರಣವನ್ನು ಸರಿಪಡಿಸಲು ಹಿರಿಯ ನಾಯಕರು ಧ್ವನಿ ಎತ್ತಬೇಕು ಎಂದು ಬೇಸರ ವ್ಯಕ್ತಪಡಿಸಿದರು.

ನಾನು ನೋವಿನಿಂದ ಈ ವಿಷಯವನ್ನು ಪ್ರಸ್ತಾಪಿಸುತ್ತಿದ್ದೇನೆ. ಮುಖ್ಯಮಂತ್ರಿಯವರ ಕುರ್ಚಿಯನ್ನು ಎಳೆದ ಘಟನೆ ಕುರಿತು ಮಾತನಾಡುವುದಿಲ್ಲ. ಆದರೆ ಇದೇ ರೀತಿ ಮುಂದುವರಿದರೆ, ಕುರ್ಚಿಯನ್ನೇ ಎಳೆದು ಹಾಕುವ ಕಾಲವೂ ದೂರವಿಲ್ಲ. ರಾಜ್ಯದಲ್ಲಿ ಅಧಿಕಾರ, ರಾಜಕೀಯ ಪ್ರಭಾವ ಮತ್ತು ಪರಸ್ಪರ ಆರೋಪ–ಪ್ರತ್ಯಾರೋಪಗಳ ಮೂಲಕ ನಾಯಕರನ್ನು ಗುರಿಯಾಗಿಸುವ ಪ್ರವೃತ್ತಿ ಹೆಚ್ಚುತ್ತಿದೆ. ಇಂತಹ ಬೆಳವಣಿಗೆಗಳಿಗೆ ಅಂತ್ಯ ಹಾಡುವ ಅಗತ್ಯವಿದೆ ಎಂದು ಅವರು ಹೇಳಿದರು.

# ಕರ್ಲಾನ್ ಹಾಸಿಗೆ ತಯಾರಿಕಾ ಘಟಕದಲ್ಲಿ ಭಾರೀ ಅಗ್ನಿ ಅವಘಡ; ಲಕ್ಷಾಂತರ ರೂ. ವಸ್ತು ಬೆಂಕಿಗಾಹುತಿ



**ಬೆಂಗಳೂರು:** ಪೀಣ್ಯ ಕೈಗಾರಿಕಾ ಪ್ರದೇಶದಲ್ಲಿರುವ ಕರ್ಲಾನ್ ಹಾಸಿಗೆ ತಯಾರಿಕಾ ಘಟಕದಲ್ಲಿ ಅಗ್ನಿ ಅವಘಡ ಸಂಭವಿಸಿದೆ. ಹಾಸಿಗೆ ತಯಾರಿಸಲು ಸಂಗ್ರಹಿಸಿಟ್ಟಿದ್ದ ಕಚ್ಚಾ ವಸ್ತುಗಳ ಶೆಡ್‌ಗೆ ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ಹೊತ್ತುಕೊಂಡಿತ್ತು. ಸ್ಥಳೀಯರು ನೀಡಿದ ಮಾಹಿತಿ ಆಧರಿಸಿ ಸ್ಥಳಕ್ಕೆ ಧಾವಿಸಿದ ಎರಡು ಅಗ್ನಿಶಾಮಕ ವಾಹನಗಳು ಬೆಂಕಿ ನಂದಿಸುವ ಕಾರ್ಯಾಚರಣೆ ನಡೆಸಿವೆ. ಘಟನೆಯಲ್ಲಿ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ.

# ಸಿದ್ದರಾಮಯ್ಯನವರಿಗೆ ಸಂಬಂಧಪಟ್ಟ ವಿಡಿಯೊ ಬಗ್ಗೆ ಎಫ್‌ಐಆರ್ ದಾಖಲಾಗಿದೆ, ಸಮಗ್ರ ತನಿಖೆ ನಡೆಸುತ್ತೇವೆ: ಪ್ರಿಯಾಂಕ್ ಖರ್ಗೆ



**ಬೆಂಗಳೂರು:** ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ವಿರುದ್ಧ ಅಪಪ್ರಚಾರ ಮಾಡುವ ರೀತಿಯ ವಿಡಿಯೋವನ್ನು ಸಾಮಾಜಿಕ ಮಾಧ್ಯಮಗಳಲ್ಲಿ ಹಾಗೂ ಸುದ್ದಿ ಮಾಧ್ಯಮಗಳಲ್ಲಿ ಪ್ರಸಾರ ಮಾಡದಂತೆ ತಡೆಯಾಜ್ಞೆ ಕೋರಿ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿ ಅದಕ್ಕೆ ನ್ಯಾಯಾಲಯ ಕೂಡ ತಡೆಯಾಜ್ಞೆ ತಂದಿರುವುದು ರಾಜ್ಯ ರಾಜಕೀಯದಲ್ಲಿ ಬಹು ಚರ್ಚಿತ ವಿಷಯವಾಗಿದೆ. ಈ ಕುರಿತು ಇಂದು ಬೆಂಗಳೂರಿನಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಗೃಹ ಸಚಿವ ಪ್ರಿಯಾಂಕ್ ಖರ್ಗೆ, ಪ್ರಕರಣ ಕುರಿತು ಎಫ್ ಐಆರ್ ದಾಖಲಿಸಲಾಗಿದೆ. ನಾವು ಸಮಗ್ರವಾಗಿ ತನಿಖೆ ನಡೆಸುತ್ತೇವೆ. ವಿಡಿಯೊದಲ್ಲಿರುವ ವಿಷಯಗಳೆಲ್ಲ ಸುಳ್ಳು ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಈ ವಿಡಿಯೊವನ್ನು ಯಾರು ಚಿತ್ರೀಕರಿಸಿದ್ದಾರೆ, ಎಲ್ಲಿಗೆ ಅಪ್‌ಲೋಡ್ ಮಾಡಲಾಗಿದೆ ಮತ್ತು ಇದರ ಹಿಂದೆ ಯಾರಿದ್ದಾರೆ ಎಂಬುದನ್ನು ತನಿಖೆ ನಡೆಸುತ್ತೇವೆ ಎಂದರು.

ಸುದ್ದಿಗೋಷ್ಠಿಯಲ್ಲಿ ಈ ವಿಷಯ ಪ್ರಸ್ತಾಪಿಸಿದ್ದ ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ, ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ವಿರುದ್ಧ ವಾಗ್ದಾಳಿ ನಡೆಸಿ 8 ವರ್ಷಗಳ ಕಾಲ ಮುಖ್ಯಮಂತ್ರಿಯಾಗಿದ್ದ ಸಿದ್ದರಾಮಯ್ಯನವರಿಗೆ ಈ ಸ್ಥಿತಿ ಬರಬಾರದಾಗಿತ್ತು. ಅವರನ್ನು ರಾಜಕೀಯವಾಗಿ ಮುಗಿಸಲು ಹೊರಟಿದ್ದಾರೆ, ಈ ಪ್ರಕರಣವನ್ನು ಸಿಬಿಐಗೆ ವಹಿಸಬೇಕು ಎಂದು ಹೇಳಿದ್ದರು.

ಈ ಬಗ್ಗೆ ಪ್ರಿಯಾಂಕ್ ಖರ್ಗೆ ಪ್ರತಿಕ್ರಿಯಿಸಿ, ಕುಮಾರಸ್ವಾಮಿಯವರು ಕೇಂದ್ರ ಮಂತ್ರಿಗಳು, ಮಾಜಿ ಮುಖ್ಯಮಂತ್ರಿಗಳು, ಅವರು ಈ ರೀತಿ ಕ್ಷುಲ್ಲಕವಾಗಿ ಮಾತನಾಡಬಾರದು, ರೇವಣ್ಣ ಅವರ ಕುಟುಂಬದ ಬಗ್ಗೆ ಕಾಂಗ್ರೆಸ್‌ನ್ನು ಆಪಾದಿಸಿದರು.

# ತುಮಕೂರಿನಲ್ಲಿ ಅಕ್ರಮ ಗೋಮಾಂಸ ಮಾರಾಟ: ಆರೋಪಿ ಪೊಲೀಸರ ವಶಕ್ಕೆ

**ತುಮಕೂರು:** ನಗರದ ಸದಾಶಿವನಗರದ 8ನೇ ಕ್ರಾಸ್‌ನಲ್ಲಿರುವ ಶೆಡ್ ಒಂದರಲ್ಲಿ ಅಕ್ರಮವಾಗಿ ಗೋಮಾಂಸ ಮಾರಾಟ ಮಾಡಲಾಗುತ್ತಿದೆ ಎಂಬ ಖಚಿತ ಮಾಹಿತಿ ಮೇರೆಗೆ ತಿಲಕ್ ಪಾರ್ಕ್ ಠಾಣೆ ಪೊಲೀಸರು ದಾಳಿ ನಡೆಸಿ, ಗೋಮಾಂಸವನ್ನು ವಶಪಡಿಸಿಕೊಂಡು ನವಾಜ್ ಎಂಬ ಆರೋಪಿಯನ್ನು ವಶಕ್ಕೆ ಪಡೆದಿದ್ದಾರೆ.

ಸದಾಶಿವನಗರದ ನಿರ್ದಿಷ್ಟ ಶೆಡ್‌ನಲ್ಲಿ ನವಾಜ್ ಎಂಬಾತ ಗೋಮಾಂಸ ಮಾರಾಟದಲ್ಲಿ ತೊಡಗಿರುವ ಬಗ್ಗೆ ಬಜರಂಗದಳ ಕಾರ್ಯಕರ್ತರಿಗೆ ಮಾಹಿತಿ ಲಭ್ಯವಾಗಿತ್ತು. ತಕ್ಷಣ ಎಚ್ಚೆತ್ತ ಕಾರ್ಯಕರ್ತರು ತುರ್ತು ಸಹಾಯವಾಣಿಗೆ (112) ಕರೆ ಮಾಡಿ ಪೊಲೀಸರಿಗೆ ಈ ಕುರಿತು ಮಾಹಿತಿ ನೀಡಿದ್ದರು.

ಮಾಹಿತಿ ಆಧರಿಸಿ ಕೂಡಲೇ ಸ್ಥಳಕ್ಕೆ ಧಾವಿಸಿದ ತಿಲಕ್ ಪಾರ್ಕ್ ಠಾಣೆಯ ಪೊಲೀಸರು ಪರಿಶೀಲನೆ ನಡೆಸಿದ್ದಾರೆ.

ಈ ವೇಳೆ ಅಕ್ರಮವಾಗಿ ಗೋಮಾಂಸ ಮಾರಾಟ ಮಾಡುತ್ತಿರುವುದು ದೃಢಪಟ್ಟಿದ್ದು, ಸ್ಥಳದಲ್ಲಿದ್ದ ಗೋಮಾಂಸವನ್ನು ಜಪ್ತಿ ಮಾಡಲಾಗಿದೆ. ಅಲ್ಲದೆ, ಆರೋಪಿ ನವಾಜ್‌ನನ್ನು ವಶಕ್ಕೆ ಪಡೆದು ವಿಚಾರಣೆ ಕೈಗೊಂಡಿದ್ದಾರೆ.

ಈ ಘಟನೆಗೆ ಸಂಬಂಧಿಸಿದಂತೆ ತಿಲಕ್ ಪಾರ್ಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಮುಂದಿನ ಕಾನೂನು ಕ್ರಮ ಜರುಗಿಸುತ್ತಿದ್ದಾರೆ.

## ಹಾಲು ಒಕ್ಕೂಟದಲ್ಲಿ 16.5 ಕೋಟಿ ಅಕ್ರಮದ ಆರೋಪ: ಸಮಗ್ರ ತನಿಖೆಗೆ ಆಗ್ರಹ

# ಸತ್ತ ಜಾನುವಾರುಗಳ ವಿಮೆ, ರೈತ ಕಲ್ಯಾಣ ಟ್ರಸ್ಟ್ ಹಣ ದುರುಪಯೋಗದ ಶಂಕೆ; ಬ್ಯಾಂಕ್ ವಹಿವಾಟುಗಳ ಪರಿಶೀಲನೆಗೆ ಒತ್ತಾಯ

**ಬಳ್ಳಾರಿ:** ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದಲ್ಲಿ ಸತ್ತ ಜಾನುವಾರುಗಳ ವಿಮೆ ಹಾಗೂ ರೈತ ಕಲ್ಯಾಣ ಟ್ರಸ್ಟ್‌ಗೆ ಸಂಬಂಧಿಸಿದ ಸುಮಾರು ?16.5 ಕೋಟಿ ಹಣ ದುರುಪಯೋಗವಾಗಿರುವ ಶಂಕೆಯಿದ್ದು, ಈ ಕುರಿತು ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಸರ್ಕಾರದ ಮಾಜಿ ನಾಮನಿರ್ದೇಶಿತ ಸದಸ್ಯ ಎನ್. ಧನುಂಜಯ ಹಮಲ್ ಆಗ್ರಹಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2018ರಿಂದ 2026ರವರೆಗಿನ ಅವಧಿಯಲ್ಲಿ ಹಾಲು ಒಕ್ಕೂಟಕ್ಕೆ ಹಾಲು ಪೂರೈಸುವ ರೈತರ ಜಾನುವಾರುಗಳಿಗೆ ಖಾಸಗಿ ವಿಮಾ ಕಂಪನಿಗಳ ಮೂಲಕ ವಿಮೆ ಮಾಡಿಸಲಾಗುತ್ತಿತ್ತು. ವಿಮಾ ಪ್ರೀಮಿಯಂ ಮೊತ್ತದಲ್ಲಿ ಶೇ.60ರಷ್ಟನ್ನು ಒಕ್ಕೂಟ ಹಾಗೂ ಶೇ.40ರಷ್ಟನ್ನು ರೈತರು ಪಾವತಿಸುತ್ತಿದ್ದರು. ಜಾನುವಾರುಗಳು ಮೃತಪಟ್ಟ ಸಂದರ್ಭದಲ್ಲಿ ವಿಮಾ ಕಂಪನಿಗಳಿಂದ ಬಿಡುಗಡೆಯಾಗುವ ಪರಿಹಾರದ ಹಣವನ್ನು ಸಂಬಂಧಪಟ್ಟ ರೈತರಿಗೆ ಪಾವತಿಸಬೇಕಾಗಿತ್ತು ಎಂದು ತಿಳಿಸಿದರು.

ಆದರೆ, ಸತ್ತ ಜಾನುವಾರುಗಳ ವಿಮಾ ಪರಿಹಾರ ಹಾಗೂ ರೈತ ಕಲ್ಯಾಣ ಟ್ರಸ್ಟ್‌ಗೆ ಸೇರಿದ ಹಣ ಸೇರಿದಂತೆ ಒಟ್ಟು ಸುಮಾರು 16.5 ಕೋಟಿ



ಅಥವಾ ಅದಕ್ಕಿಂತ ಹೆಚ್ಚಿನ ಮೊತ್ತವನ್ನು ಅರ್ಹ ರೈತರಿಗೆ ಪಾವತಿಸದೆ, ಇತರ ವ್ಯಕ್ತಿಗಳ ಬ್ಯಾಂಕ್ ಖಾತೆಗಳಿಗೆ ವರ್ಗಾಯಿಸಿರುವ ಶಂಕೆಯಿದೆ ಎಂದು ಆರೋಪಿಸಿದರು.

**ಅಧಿಕಾರಿಗಳು, ಸಿಬ್ಬಂದಿ ವಿರುದ್ಧ ತನಿಖೆಗೆ ಒತ್ತಾಯ:** ಈ ಪ್ರಕರಣದಲ್ಲಿ ಹಾಲು ಒಕ್ಕೂಟದ ಕೆಲವು ಅಧಿಕಾರಿಗಳು ಹಾಗೂ ಸಿಬ್ಬಂದಿ ಭಾಗಿಯಾಗಿರುವ ಶಂಕೆ ವ್ಯಕ್ತಪಡಿಸಿದ ಧನುಂಜಯ ಹಮಲ್, ನಿವೃತ್ತ ಡೆಪ್ಯುಟಿ ಮ್ಯಾನೇಜರ್ ಹಾಗೂ ಒಕ್ಕೂಟದ ನಿರ್ದೇಶಕ ಹೆಚ್. ಮರುಳಸಿದ್ದಪ್ಪ, ವ್ಯವಸ್ಥಾಪಕ ನಿರ್ದೇಶಕ ಎಸ್. ಸುದರ್ಶನ ರೆಡ್ಡಿ, ಉಪವ್ಯವಸ್ಥಾಪಕ ವೆಂಕಟೇಶ್ ಜವಳಿ, ಪಶುವೈದ್ಯಾಧಿಕಾರಿ ಶಂಭುಕುಮಾರ್, ಉಪವ್ಯವಸ್ಥಾಪಕ ಹನುಮಂತ ಗೌಡ ಮತ್ತು ಲೆಕ್ಕ ಸಹಾಯಕಿ ಉಮಾಮಹೇಶ್ವರಿ ಸೇರಿದಂತೆ ಸಂಬಂಧಪಟ್ಟವರ ಪಾತ್ರದ ಕುರಿತು ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ತಮ್ಮ ದೂರಿನಲ್ಲಿ ಕೆ. ಬಸವರಾಜ, ಕೆ. ಈರಮ್ಮ, ಸಾಗರಬಾಬು, ಸಾಗಯ ರಾಣಿ ಸೇರಿದಂತೆ ಇತರರ ಬ್ಯಾಂಕ್ ಖಾತೆಗಳಿಗೆ ವಿಮೆ ಮತ್ತು ಪರಿಹಾರದ ಹಣ ಜಮೆಯಾಗಿರುವುದನ್ನು ಉಲ್ಲೇಖಿಸಿರುವುದಾಗಿ ತಿಳಿಸಿದರು. ಈ ಹಣ ವರ್ಗಾವಣೆಯ ಹಿಂದಿನ ಉದ್ದೇಶ, ಹಣದ ಅಂತಿಮ ಬಳಕೆ ಹಾಗೂ ಅರ್ಹ ಫಲಾನುಭವಿಗಳಿಗೆ ಪರಿಹಾರ ತಲುಪಿದೆಯೇ ಎಂಬುದನ್ನು ಅಧಿಕಾರಿಗಳು ಪರಿಶೀಲಿಸಬೇಕು ಎಂದರು.

**ವಿಮಾ ದಾಖಲೆಗಳಲ್ಲೂ ಅಕ್ರಮದ ಶಂಕೆ:** ಜಾನುವಾರುಗಳ ವಿಮೆ ಪ್ರಕರಣದಲ್ಲಿ ಮೃತಪಟ್ಟ ಜಾನುವಾರುಗಳ ಪ್ರಮಾಣಕ್ಕೆ ಸಂಬಂಧಿಸಿದ ದಾಖಲೆಗಳಲ್ಲಿ ವ್ಯತ್ಯಾಸಗಳಿರುವ ಶಂಕೆಯಿದೆ ಎಂದು ಅವರು ಆರೋಪಿಸಿದರು. ವಿಮೆ ಮಾಡಿಸಲಾದ ಜಾನುವಾರುಗಳ ಪೈಕಿ ಶೇ.25ರಷ್ಟು ಮಾತ್ರ ಮೃತಪಟ್ಟಿದ್ದರೂ, ಉಳಿದ ಶೇ.75ರಷ್ಟು ಜಾನುವಾರುಗಳು ಮೃತಪಟ್ಟಿರುವಂತೆ ದಾಖಲೆ ಸೃಷ್ಟಿಸಲಾಗಿದೆ ಎಂಬ ಅನುಮಾನವಿದೆ. ಈ ಕುರಿತು ದಾಖಲೆಗಳ ಸತ್ಯಾಸತ್ಯತೆಯನ್ನು ಪರಿಶೀಲಿಸಬೇಕು ಎಂದು ಆಗ್ರಹಿಸಿದರು.

ರೈತರ ಜಾನುವಾರುಗಳಿಗೆ ವಿಮೆ ಮಾಡಿಸುವ ಮುಖ್ಯ ಉದ್ದೇಶ, ಅವು ಮೃತಪಟ್ಟ ಸಂದರ್ಭದಲ್ಲಿ ರೈತರಿಗೆ ಆರ್ಥಿಕ ನೆರವು ಒದಗಿಸುವುದಾಗಿದೆ. ಆದರೆ, ರೈತರಿಗೆ ಸೇರಬೇಕಾದ ಪರಿಹಾರದ ಹಣವೇ ತಲುಪದಿದ್ದರೆ ಅವರ ಬದುಕಿಗೆ ಆರ್ಥಿಕ ಹೊಡೆತ ಬೀಳುತ್ತದೆ. ಹೀಗಾಗಿ ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ, ರೈತರಿಗೆ ನ್ಯಾಯ ಒದಗಿಸಬೇಕು ಎಂದು ಹೇಳಿದರು.

2018ರಿಂದ 2026ರವರೆಗಿನ ವಿಮಾ ಪರಿಹಾರ ವಿತರಣೆ, ರೈತ ಕಲ್ಯಾಣ ಟ್ರಸ್ಟ್‌ನ ಹಣಕಾಸು ವ್ಯವಹಾರಗಳು ಹಾಗೂ ಸಂಬಂಧಪಟ್ಟ ಬ್ಯಾಂಕ್ ಖಾತೆಗಳ ಕುರಿತು ಸಮಗ್ರ ಲೆಕ್ಕಪರಿಶೋಧನೆ ನಡೆಸಬೇಕು.

ಆರೋಪಗಳು ಸಾಬೀತಾದಲ್ಲಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸಿ, ಅಕ್ರಮವಾಗಿ ವರ್ಗಾವಣೆಯಾಗಿರುವ ಹಣವನ್ನು ವಸೂಲಿ ಮಾಡಿ ಅರ್ಹ ರೈತರು ಹಾಗೂ ಒಕ್ಕೂಟಕ್ಕೆ ನ್ಯಾಯ ಒದಗಿಸಬೇಕು ಎಂದು ಎನ್. ಧನುಂಜಯ ಹಮಲ್ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಸಧಾ ಶಿವ ರೆಡ್ಡಿ, ಬಸವನಗೌಡ, ಪ್ರಭಾಕರ್ ರೆಡ್ಡಿ, ಮಾಧವರೆಡ್ಡಿ, ಉಮಾಪತಿ, ತಿಮ್ಮರೆಡ್ಡಿ, ಬಸವರಾಜ್ ಸ್ವಾಮಿ ಹಾಗೂ ರಾಮುಗೌಡ ಉಪಸ್ಥಿತರಿದ್ದರು.

## ಈಶಾನ್ಯ ವಲಯ ಮಟ್ಟದ ಗೃಹರಕ್ಷಕರ ವೃತ್ತಿಪರ ಕ್ರೀಡಾಕೂಟದ ಉದ್ಘಾಟನಾ ಕಾರ್ಯಕ್ರಮ

# ಕ್ರೀಡಾಸ್ಫೂರ್ತಿಯಿಂದ ಸ್ಪರ್ಧಿಸಿ, ರಾಜ್ಯಮಟ್ಟದಲ್ಲಿ ಸಾಧನೆ ಮಾಡಿ: ಬಿ.ಎನ್.ಪ್ರಹ್ಲಾದ ರೆಡ್ಡಿ

**ಬಳ್ಳಾರಿ:** ಬಳ್ಳಾರಿ ಜಿಲ್ಲೆಯ ಮೀನಳ್ಳಿ ಗ್ರಾಮದ ಸಮೀಪವಿರುವ ಗೃಹರಕ್ಷಕ ದಳದ ತರಬೇತಿ ಕೇಂದ್ರದ ಮೈದಾನದಲ್ಲಿ 2026–27ನೇ ಸಾಲಿನ ಈಶಾನ್ಯ ವಲಯ ಮಟ್ಟದ ಗೃಹರಕ್ಷಕರ ವೃತ್ತಿಪರ ಕ್ರೀಡಾಕೂಟದ ಉದ್ಘಾಟನಾ ಕಾರ್ಯಕ್ರಮ ನಡೆಯಿತು.

ಈ ಕ್ರೀಡಾಕೂಟದಲ್ಲಿ ಈಶಾನ್ಯ ವಲಯದ ಏಳು ಜಿಲ್ಲೆಗಳ ಗೃಹರಕ್ಷಕ ದಳದ ಕ್ರೀಡಾಪಟುಗಳು ಭಾಗವಹಿಸಿದ್ದರು.

ಬಳ್ಳಾರಿ ಜಿಲ್ಲಾ ಗೃಹರಕ್ಷಕ ದಳದ ಕಮಾಂಡೆಂಟ್, ಮಾಜಿ ಅರೆಸೈನಿಕ ಹಾಗೂ 'ಬಳ್ಳಾರಿ ಸಾಧಕ ರತ್ನ' ಪ್ರಶಸ್ತಿ ಪುರಸ್ಕೃತರಾದ ಶೇಕ್ ಸಾಬ್ ಅವರು ಕ್ರೀಡಾಕೂಟವನ್ನು ಉದ್ಘಾಟಿಸಿದರು. ಮುಖ್ಯ ಅತಿಥಿಗಳಾಗಿ ಮಾಜಿ ಅರೆಸೈನಿಕ ಹಾಗೂ 'ದೇಶ ಸೇವಾ ರತ್ನ' ಮತ್ತು 'ಕರ್ನಾಟಕ ಸಾಧಕ ರತ್ನ' ಪ್ರಶಸ್ತಿ ಪುರಸ್ಕೃತರಾದ ಬಿ.ಎನ್.ಪ್ರಹ್ಲಾದ ರೆಡ್ಡಿ ಪಾಲ್ಗೊಂಡಿದ್ದರು.





ಗಣ್ಯರು ಸಸಿಗೆ ನೀರುಣಿಸುವ ಮೂಲಕ ಪರಿಸರ ಸಂರಕ್ಷಣೆಯ ಸಂದೇಶ ಸಾರಿದರು. ಬಳಿಕ ಹಸಿರು ಧ್ವಜ ಪ್ರದರ್ಶಿಸಿ ಕ್ರೀಡಾಕೂಟ–ಕ್ಕೆ ಅಧಿಕೃತವಾಗಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಗಣ್ಯರು, ವಿವಿಧ ಜಿಲ್ಲೆಗಳಿಂದ ಆಗಮಿಸಿರುವ ಕ್ರೀಡಾಪಟುಗಳು ಕ್ರೀಡಾ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಕ್ರೀಡೆಗಳು ದೈಹಿಕ ಆರೋಗ್ಯ ಮತ್ತು ದೇಹದ ಬೆಳವಣಿಗೆಗೆ ಮಹತ್ವದ ಕೊಡುಗೆ ನೀಡುತ್ತವೆ. ಆದ್ದರಿಂದ ಪ್ರತಿಯೊಬ್ಬರೂ ಶಾಂತಿ, ಶಿಸ್ತು ಮತ್ತು ಕ್ರೀಡಾಸ್ಫೂರ್ತಿಯಿಂದ ಸ್ಪರ್ಧೆಗಳಲ್ಲಿ ಭಾಗವಹಿಸಬೇಕು ಎಂದು ಸಲಹೆ ನೀಡಿದರು.

ಕ್ರೀಡೆಯಲ್ಲಿ ಗೆಲುವು ಸಾಧಿಸುವ ಪ್ರಯತ್ನ ಪ್ರತಿಯೊಬ್ಬ ಕ್ರೀಡಾಪಟುವಿನಲ್ಲಿರಬೇಕು. ಆದರೆ ಎಲ್ಲರೂ ಗೆಲ್ಲಲು ಸಾಧ್ಯವಿಲ್ಲ ಎಂಬುದನ್ನು ಅರಿತುಕೊಂಡು ಸೋಲಿನಿಂದ ನಿರಾಶರಾಗದೆ, ಮುಂದಿನ ಸ್ಪರ್ಧೆಗಳಲ್ಲಿ ಯಶಸ್ಸು ಸಾಧಿಸಲು ಪ್ರಯತ್ನಿಸಬೇಕು. ಯಾವುದೇ ದ್ವೇಷ ಅಥವಾ ವೈಮನಸ್ಸಿಗೆ ಅವಕಾಶ ನೀಡದೆ ಪರಸ್ಪರ ಪ್ರೀತಿ, ಗೌರವದೊಂದಿಗೆ ಸ್ಪರ್ಧಿಸಬೇಕು. ತಮ್ಮ ಜಿಲ್ಲೆಯ ಗೃಹರಕ್ಷಕ ದಳದ ಘಟಕಕ್ಕೆ ಉತ್ತಮ ಹೆಸರು ತರುವುದರ ಜತೆಗೆ ಮುಂಬರುವ ರಾಜ್ಯಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿ ಪ್ರಶಸ್ತಿಗಳನ್ನು ಗೆಲ್ಲುವ ಗುರಿ ಹೊಂದಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಬಳ್ಳಾರಿ ಜಿಲ್ಲಾ ಗೃಹರಕ್ಷಕ ದಳದ ಡೆಪ್ಯೂಟಿ ಕಮಾಂಡೆಂಟ್ ತಿಪ್ಪೇಸ್ವಾಮಿ, ಮಾಜಿ ಸೆಕೆಂಡ್ ಇನ್ ಕಮಾಂಡೆಂಟ್ ಲಕ್ಷ್ಮೀನಾರಾಯಣ, ಜೆ. ಸುರೇಶ್, ಕಮಾಂಡರ್ ಬಸವಲಿಂಗ, ಹಿರಿಯ ಪ್ಲಟೂನ್ ಕಮಾಂಡರ್ ಯೋಗೇಂದ್ರ, ಬೋಧಕರು, ಪ್ಲಟೂನ್ ಕಮಾಂಡರ್ ಲಕ್ಷ್ಮೀನಾರಾಯಣ, ಮಲ್ಲಿಕಾರ್ಜುನಗೌಡ, ನಾಗರಾಜ್ ಸೇರಿದಂತೆ ಏಳು ಜಿಲ್ಲೆಗಳ ಬೋಧಕ ವರ್ಗದವರು ಹಾಗೂ ಕ್ರೀಡಾಪಟುಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳನ್ನು ಗೃಹರಕ್ಷಕ ದಳದ ವತಿಯಿಂದ ಸನ್ಮಾನಿಸಲಾಯಿತು.

ಬಳ್ಳಾರಿಯಲ್ಲಿ ಕನ್ನಡ ಧ್ವಜಕಟ್ಟೆ, ಡಾ. ರಾಜ್ ಮಹಾದ್ವಾರ ನಿರ್ಮಾಣಕ್ಕೆ ಆಗ್ರಹ

# ಪುನೀತ್ ರಾಜ್‌ಕುಮಾರ್ ಪುತ್ಥಳಿ ಸ್ಥಳದ ಅಭಿವೃದ್ಧಿ, ಉದ್ಯಾನವನಗಳ ಸುಧಾರಣೆಗೆ ಮನವಿ



**ಬಳ್ಳಾರಿ:** ನಗರದ ಕನ್ನಡದ ಸಾಂಸ್ಕೃತಿಕ ಪರಂಪರೆಯನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಕನ್ನಡ ಧ್ವಜಕಟ್ಟೆ ನಿರ್ಮಾಣ, ವರನಟ ಡಾ. ರಾಜ್‌ಕುಮಾರ್ ಹೆಸರಿನಲ್ಲಿ ಮಹಾದ್ವಾರ ಸ್ಥಾಪನೆ ಹಾಗೂ ಕರ್ನಾಟಕ ರತ್ನ ಡಾ. ಪುನೀತ್ ರಾಜ್‌ಕುಮಾರ್ ಅವರ ಪುತ್ಥಳಿ ಸ್ಥಳದ ಅಭಿವೃದ್ಧಿ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಕನ್ನಡಪರ ಅಭಿಮಾನಿಗಳು ಜಿಲ್ಲಾಧಿಕಾರಿ ಬಿ. ನಾಗೇಂದ್ರ ಪ್ರಸಾದ್ ಅವರಿಗೆ ಮನವಿ ಸಲ್ಲಿಸಿದರು.

ನಗರದ ಅನಂತಪುರ ರಸ್ತೆಯಲ್ಲಿರುವ ಜಿಲ್ಲಾಧಿಕಾರಿ ಕಚೇರಿಯಲ್ಲಿ ಮನವಿ ಸಲ್ಲಿಸಿದ ಅವರು, ನಗರದ ಹೃದಯಭಾಗದ ಸಂಗಮ ವೃತ್ತದಲ್ಲಿ ಕನ್ನಡ ಧ್ವಜಕಟ್ಟೆ ನಿರ್ಮಿಸಿ ನಿರಂತರವಾಗಿ ಕನ್ನಡ ಧ್ವಜ ಹಾರಾಡುವಂತೆ ವ್ಯವಸ್ಥೆ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಗಡಿಗಿ ಚನ್ನಪ್ಪ ವೃತ್ತದಿಂದ ಎಂ.ಜಿ. ರಸ್ತೆಯವರೆಗೆ ಡಾ. ರಾಜ್‌ಕುಮಾರ್ ಅವರ ಹೆಸರನ್ನು ನಾಮಕರಣ ಮಾಡಲಾಗಿದ್ದರೂ ಸೂಕ್ತ ನಾಮಫಲಕಗಳಿಲ್ಲ. ಹೀಗಾಗಿ ಗಡಿಗಿ ಚನ್ನಪ್ಪ ವೃತ್ತದಲ್ಲಿ ಡಾ. ರಾಜ್‌ಕುಮಾರ್ ಅವರ ಹೆಸರಿನಲ್ಲಿ ಮಹಾದ್ವಾರ ನಿರ್ಮಿಸಿ ಗೌರವ ಸಲ್ಲಿಸಬೇಕು ಎಂದು ಮನವಿಯಲ್ಲಿ ಕೋರಿದರು.

ನಗರದ ಡಾ. ರಾಜ್‌ಕುಮಾರ್ ಉದ್ಯಾನವನವನ್ನು ಅಭಿವೃದ್ಧಿಪಡಿಸಿ, ಸಾರ್ವಜನಿಕರಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸಬೇಕು. ಉದ್ಯಾನವನದಲ್ಲಿ ನಡೆಯುವ ಅನೈತಿಕ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

**ಪುನೀತ್ ಪುತ್ಥಳಿ ಸ್ಥಳಕ್ಕೆ ಮೂಲಸೌಕರ್ಯ ಕಲ್ಪಿಸಿ**

ಜಿಲ್ಲಾ ಕ್ರೀಡಾಂಗಣದಲ್ಲಿರುವ ಕರ್ನಾಟಕ ರತ್ನ ಡಾ. ಪುನೀತ್ ರಾಜ್‌ಕುಮಾರ್ ಅವರ ಪುತ್ಥಳಿಯ ಬಳಿ ಸಾರ್ವಜನಿಕರು ಗೌರವ ಸಲ್ಲಿಸಲು ಅನುಕೂಲವಾಗುವಂತೆ ಮೆಟ್ಟಿಲು ಅಥವಾ ಏಣಿ ನಿರ್ಮಿಸಬೇಕು. ಅಲ್ಲಿರುವ ಕೆರೆಯನ್ನು ಅಭಿವೃದ್ಧಿಪಡಿಸಿ, ಕಾವಲುಗಾರರನ್ನು ನೇಮಿಸಬೇಕು. ಆಹಾರ ಮಳಿಗೆಗಳನ್ನು ಸ್ಥಾಪಿಸುವುದರ ಜತೆಗೆ ಗಿಡಗಳನ್ನು ನೆಟ್ಟು ಹಸಿರು ಪರಿಸರ ನಿರ್ಮಿಸಬೇಕು ಎಂದು ಮನವಿ ಮಾಡಿದರು.

ಮಕ್ಕಳಿಗಾಗಿ ಆಟದ ಸಾಮಗ್ರಿಗಳನ್ನು ಅಳವಡಿಸುವುದು, ಸಾರ್ವಜನಿಕರು ಕುಳಿತುಕೊಳ್ಳಲು ಬೆಂಚುಗಳನ್ನು ಹಾಕುವುದು ಹಾಗೂ ಬೆಳಕಿನ ಕೊರತೆ ನೀಗಿಸಲು ಹೆಚ್ಚುವರಿ ವಿದ್ಯುತ್ ದೀಪಗಳನ್ನು ಅಳವಡಿಸುವ ಮೂಲಕ ಸ್ಥಳವನ್ನು ಸುಂದರಗೊಳಿಸಬೇಕು. ಅನೈತಿಕ ಚಟುವಟಿಕೆಗಳನ್ನು ತಡೆಗಟ್ಟಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಹಿರಿಯ ಕನ್ನಡಪರ ಹೋರಾಟಗಾರರಿಗೆ ಗೌರವ ನೀಡಿ ಈ ಬಾರಿಯ ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ ಕನ್ನಡ ಭಾಷೆ, ನಾಡು–ನುಡಿಯ ಉಳಿವಿಗಾಗಿ ಶ್ರಮಿಸಿದ ಹಿರಿಯ ಕನ್ನಡಪರ ಹೋರಾಟಗಾರರನ್ನು ಗುರುತಿಸಿ ಗೌರವಿಸುವ ಕಾರ್ಯಕ್ರಮಗಳನ್ನು ಆಯೋಜಿಸಬೇಕು. ಅಲ್ಲದೆ, ಬಳ್ಳಾರಿ ನಗರದ ಬಿ.ಡಿ.ಎ. ಮೈದಾನಕ್ಕೆ ಕರ್ನಾಟಕ ರತ್ನ ಡಾ. ಪುನೀತ್ ರಾಜ್‌ಕುಮಾರ್ ಅವರ ಹೆಸರನ್ನು ನಾಮಕರಣ ಮಾಡಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿದ ಮನವಿಯಲ್ಲಿ ತಿಳಿಸಿದರು.

# ಕೆಟ್ಟ ವಿಚಾರಗಳನ್ನ ಸುಟ್ಟು ಹಾಕುವುದೇ ದೇವಿ ಪುರಾಣದ ಉದ್ದೇಶ:ಮ್ಯಾಗೇರಿ

**ಶಿಗ್ಗಾವಿ:** ಕೆಟ್ಟ ವಿಚಾರ, ಕೆಟ್ಟ ಆಚಾರ ಸುಟ್ಟು ಹಾಕುವುದೇ ದೇವಿ ಪುರಾಣದ ಮುಖ್ಯ ಉದ್ದೇಶವಾಗಿದೆ ಎಂದು ಸಾಹಿತಿ ಶಿವಾನಂದ ಮ್ಯಾಗೇರಿ ಹೇಳಿದರು.

ಶಿಗ್ಗಾವಿ ತಾಲೂಕಿನ ಹಿರೇಬೆಂಡಿಗೇರಿ ಗ್ರಾಮದಲ್ಲಿ ನಡೆದ ಶ್ರೀದೇವಿ ಪುರಾಣ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ದೇವಿ ಪುರಾಣ ದೇಹದ ಪುರಾಣ ರಾಕ್ಷಸರನ್ನು ನಾವು ಮನದೊಳಗೆ ಶರೀರದೊಳಗೆ ಇಟ್ಟುಕೊಂಡು ಬದುಕುತ್ತಿರುವುದೇ ನಮ್ಮ ಬದುಕಿಗೆ ಅಶಾಂತಿ ತಂದಿದೆ, ಕಾಮ, ಕ್ರೋಧ, ಲೋಭ ಮೋಹ, ಮದ, ಮತ್ಸರ ಎಂಬ ಮಾತ್ರ ದ್ವೇಷ ರೋಷ. ಕೋಪ ಕೇಡು ಹೊಟ್ಟೆ ಕಿಚ್ಚು ಅಸೂಯೆ ಅಹಂಕಾರವೆಂಬ ರಾಕ್ಷಸರು ನಮ್ಮ ಶರೀರದಲ್ಲಿ ವಾಸವಾಗಿದ್ದಾರೆ

ಅವರನ್ನು ನಾವು ನಮ್ಮ ಮನ ಎಂಬ ಮನೆಯನ್ನು ಬಿಡಿಸುವವರೆಗೂ ನಮಗೆ ನೆಮ್ಮದಿ ಸಿಗುವುದಿಲ್ಲ





ಅವರೊಂದಿಗೆ ನಮ್ಮ ಮನಸೇ ಸಾಕ್ಷಾತ ದೇವಿ ರೂಪ ತಾಳಿ ಯುದ್ಧ ಮಾಡಿ ನಾಶ ಮಾಡಿದಾಗ ನಮ್ಮ ಬದುಕಿನಲ್ಲಿ ಶಾಂತಿ ನೆಮ್ಮದಿ ಆರೋಗ್ಯ ಆನಂದ ಸಂತೃಪ್ತಿ ಸಂಪತ್ತು ಪ್ರಾಪ್ತಿಯಾಗುತ್ತದೆ ಎಂದರು.

ಪುರಾಣ ಪ್ರವಚನ ಮಾಡಿದ ಕುಮಾರಿ ಗಾಯತ್ರಿ ಪತ್ತಾರ್ ಪ್ರವಚನದಲ್ಲಿ ಪ್ರತಿಯೊಬ್ಬರ ಮನಸ್ಸು ಚಂಚಲವಾಗಿದೆ ನೆಮ್ಮದಿ ಹಾಳಾಗಿ ಹೋಗಿದೆ ಅದಕ್ಕೆ ಕಾರಣ ನಮ್ಮಲ್ಲಿ ಪ್ರತಿದಿನ ನಾವು ನಾನು ನನ್ನದು ನನ್ನಿಂದ ಎಂಬ ಸ್ವಾರ್ಥದಲ್ಲಿ ಮುಳುಗಿ ಬದುಕಿನ ಅರ್ಥ ಕಳೆದುಕೊಂಡಿದ್ದೇವೆ. ದೇವಿ ಪುರಾಣದಿಂದ ನಾವೆಲ್ಲರೂ ಜ್ಞಾನ ಮತ್ತು ಧ್ಯಾನ ಮಾಡಿ ದೇವಿ ಚರಿತ್ರೆಯನ್ನು ನಮ್ಮ ಬದುಕಿನಲ್ಲಿ ಅಳವಡಿಸಿಕೊಂಡರೆ ನಮ್ಮ ಬದುಕು ಬಂಗಾರಕಿಂತ ಹೆಚ್ಚು ಬೆಲೆ ಮತ್ತು ಗೌರವ ತರುತ್ತದೆ ಎಂದರು.

ಈ ಸಂದರ್ಭದಲ್ಲಿ ಸಂಗೀತ ಸೇವೆಯನ್ನು ಕುಮಾರ ಸರ್ವೇಶ ಪತ್ತಾರ್ ನೆರವೇರಿಸಿದರು, ಗ್ರಾಮದ ಹಿರಿಯರಾದ ತಿಪ್ಪಣ್ಣ ಸಾತಣ್ಣವರ . ಚೆನ್ನಪ್ಪ ಕುಂದಗೋಳ. ಬಸನಗೌಡ ಪಾಟೀಲ್.

# ದ್ಯಾಮವ್ವ ದೇವಸ್ಥಾನದಲ್ಲಿ ಭಕ್ತಿಭಾವದಿಂದ ನೆರವೇರಿದ 101 ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ



**ಶಿಗ್ಗಾವಿ:** ಪಟ್ಟಣದ ಗ್ರಾಮದೇವತೆ ಶ್ರೀ ದ್ಯಾಮವ್ವದೇವಿ ದೇವಸ್ಥಾನದಲ್ಲಿ ಶರನ್ನವರಾತ್ರಿ ಉತ್ಸವದ ಪ್ರಯುಕ್ತ 101 ಮುತ್ತೈದೆಯರಿಗೆ ಉಡಿ ತುಂಬುವ ಧಾರ್ಮಿಕ ಕಾರ್ಯಕ್ರಮ ಭಕ್ತಿಭಾವದಿಂದ ನೆರವೇರಿತು.

ಈ ಸಂದರ್ಭದಲ್ಲಿ ಮುತ್ತೈದೆಯರಿಗೆ ಅರಿಶಿನ, ಕುಂಕುಮ, ಬಳೆ, ಹಣ್ಣು–ಹಂಪಲು ಸೇರಿದಂತೆ ಮಂಗಳದ್ರವ್ಯಗಳನ್ನು ನೀಡಿ ಸಂಪ್ರದಾಯ ಆಚರಿಸಲಾಯಿತು. ನವರಾತ್ರಿಯ ಶಕ್ತಿ ಸ್ವರೂಪಿಣಿ ದೇವಿಯ ಆರಾಧನೆಗೆ ವಿಶೇಷ ಮಹತ್ವವಿದ್ದು, ಉಡಿ ತುಂಬುವ ಆಚರಣೆ ಭಾರತೀಯ ಸಂಸ್ಕೃತಿ ಹಾಗೂ ಧಾರ್ಮಿಕ ಪರಂಪರೆಯ ಪ್ರತೀಕವಾಗಿದೆ. ಇಂತಹ ಕಾರ್ಯಕ್ರಮಗಳು ಭಕ್ತರಲ್ಲಿ ಆಧ್ಯಾತ್ಮಿಕ ಭಾವನೆ ಬೆಳೆಸುವುದರ ಜೊತೆಗೆ ಸೌಹಾರ್ದತೆ ಮತ್ತು ಸಂಸ್ಕೃತಿಯ ಉಳಿವಿಗೆ ಸಹಕಾರಿ ಎಂದು ಭಕ್ತರು ಅಭಿಪ್ರಾಯಪಟ್ಟರು. ಕಾರ್ಯಕ್ರಮದಲ್ಲಿ ರೇಖಾ ಗಿರಿಮಠ, ರತ್ನಾ ಗಾಣಿಗೇರ, ಸಂಧ್ಯಾ ಬೆಳಗಲಿ, ಸುಜಾತಾ ಬಡಿಗೇರ, ಶ್ರೀದೇವಿ ಕಮ್ಮಾರ್, ವೇದಾ ಹಿರೇಮಠ, ಜ್ಯೋತಿ ಚಿಕ್ಕಮಠ, ವಿದ್ಯಾ ಈಳಿಗೇರ, ಗಂಗಾ ಗಾಣಿಗೇರ, ಗೌರಮ್ಮ ಬಡಿಗೇರ, ಶಂಕ್ರಮ್ಮ ಬಡಿಗೇರ ಸೇರಿದಂತೆ ಸದ್ಭಕ್ತರು ಭಾಗವಹಿಸಿದ್ದರು.

# ವಿಶ್ವ ಆಹಾರ ದಿನ: ಭಾರತದ ಸ್ಥಿತಿ ಎತ್ತ

ಅಕ್ಟೋಬರ್ 16 ರಂದು ಜಗತ್ತಿನಾದ್ಯಂತ "ವಿಶ್ವ ಆಹಾರ ದಿನ" (World Food Day) ವನ್ನಾಗಿ ಆಚರಿಸಲಾಗುತ್ತದೆ. ಈ ದಿನವು ಕೇವಲ ಆಹಾರದ ಮಹತ್ವವನ್ನು ನೆನಪಿಸಿಕೊಳ್ಳುವ ದಿನವಲ್ಲ; ಬದಲಿಗೆ ಹಸಿವು, ಅಪೌಷ್ಟಿಕತೆ, ಆಹಾರ ಭದ್ರತೆ ಮತ್ತು ಸುಸ್ಥಿರ ಕೃಷಿಯ ಸವಾಲುಗಳ ಕುರಿತು ಜಾಗತಿಕ ಮಟ್ಟದಲ್ಲಿ ಚಿಂತನೆ ಹಾಗೂ ಜಾಗೃತಿ ಮೂಡಿಸುವ ಒಂದು ಪ್ರಮುಖ ಘಟ್ಟವಾಗಿದೆ.

ಈ ಹಿನ್ನಲೆಯಲ್ಲಿ ನಮ್ಮ ಭಾರತದಲ್ಲಿ ಆಹಾರದ ಲಭ್ಯತೆ, ಕೃಷಿ ಉತ್ಪಾದನೆ, ಪೌಷ್ಟಿಕಾಂಶದ ಸ್ಥಿತಿಗತಿ ಮತ್ತು ಜಾಗತಿಕ ಸೂಚ್ಯಂಕಗಳಿಗೆ ಸಂಬಂಧಿಸಿದ ಪ್ರಮುಖ ಮತ್ತು ನವೀಕೃತ ಅಂಕಿ–ಅಂಶಗಳ ವಿವರವಾದ ಮಾಹಿತಿ ಇಲ್ಲಿದೆ:

**1. ಕೃಷಿ ಉತ್ಪಾದನೆ ಮತ್ತು ಸ್ವಾವಲಂಬನೆ (Food Production)**

ಭಾರತವು ಧಾನ್ಯ ಉತ್ಪಾದನೆಯಲ್ಲಿ ವಿಶ್ವದಲ್ಲೇ ಅತಿ ದೊಡ್ಡ ಕೃಷಿ ಶಕ್ತಿಗಳಲ್ಲಿ ಒಂದಾಗಿ ಹೊರಹೊಮ್ಮಿದೆ.

ದಾಖಲೆಯ ಧಾನ್ಯ ಉತ್ಪಾದನೆ: ಇತ್ತೀಚಿನ ಕೇಂದ್ರ ಕೃಷಿ ಸಚಿವಾಲಯದ ವರದಿ ಪ್ರಕಾರ, ಭಾರತವು ವಾರ್ಷಿಕ ಸುಮಾರು 357.73 ಮಿಲಿಯನ್ ಮೆಟ್ರಿಕ್ ಟನ್ (ಒಒಖ) ಸಾರ್ವಕಾಲಿಕ ದಾಖಲೆಯ ಆಹಾರ ಧಾನ್ಯಗಳನ್ನು ಉತ್ಪಾದಿಸಿದೆ.

ತೋಟಗಾರಿಕೆ (Horticulture) ಉತ್ಪನ್ನಗಳು: ಹಣ್ಣು ಮತ್ತು ತರಕಾರಿಗಳ ಉತ್ಪಾದನೆಯು ಧಾನ್ಯಗಳ ಉತ್ಪಾದನೆಯನ್ನೂ ಮೀರಿಸಿದ್ದು, ವಾರ್ಷಿಕ ಸುಮಾರು 362.08 ಮಿಲಿಯನ್ ಟನ್ ತಲುಪಿದೆ.

**ಜಾಗತಿಕ ಸ್ಥಾನ: ಅಕ್ಕಿ:** ವಿಶ್ವದ ಒಟ್ಟು ಉತ್ಪಾದನೆಯ 26.5% ಪಾಲು ಹೊಂದುವ ಮೂಲಕ ವಿಶ್ವದ ಅತಿ ದೊಡ್ಡ ಅಕ್ಕಿ ಉತ್ಪಾದಕ ದೇಶವಾಗಿದೆ.

ಗೋಧಿ: ವಿಶ್ವದ 2ನೇ ಅತಿ ದೊಡ್ಡ ಉತ್ಪಾದಕ (ಸುಮಾರು 14.2%).

ಸಿರಿಧಾನ್ಯಗಳು (Millets): ವಾರ್ಷಿಕ 18.59 ಮಿಲಿಯನ್ ಟನ್ ಉತ್ಪಾದನೆಯೊಂದಿಗೆ ಭಾರತವು ವಿಶ್ವದಲ್ಲೇ ಮೊದಲ ಸ್ಥಾನದಲ್ಲಿದೆ. (ರಾಜಸ್ಥಾನ, ಮಹಾರಾಷ್ಟ್ರ ಮತ್ತು ಕರ್ನಾಟಕ ಪ್ರಮುಖ ಕೊಡುಗೆ ನೀಡುತ್ತವೆ).

**ಆಹಾರ ರಫ್ತು:** ಭಾರತದ ಕೃಷಿ ಮತ್ತು ಸಂಸ್ಕರಿಸಿದ ಆಹಾರ ಉತ್ಪನ್ನಗಳ ರಫ್ತು ಮೌಲ್ಯ 51.1 ಬಿಲಿಯನ್ ಡಾಲರ್‌ಗೆ ಏರಿಕೆಯಾಗಿದೆ.

**2. ಜಾಗತಿಕ ಹಸಿವು ಸೂಚ್ಯಂಕ (Global Hunger Index - GHI)**

ಉತ್ಪಾದನೆಯಲ್ಲಿ ದೇಶ ಮುಂಚೂಣಿಯಲ್ಲಿದ್ದರೂ, ವಿತರಣೆ ಮತ್ತು ಅಪೌಷ್ಟಿಕತೆಯ ಕಾರಣದಿಂದ ಜಾಗತಿಕ ಹಸಿವು ಸೂಚ್ಯಂಕದಲ್ಲಿ ಭಾರತದ ಶ್ರೇಯಾಂಕ ಕಳವಳಕಾರಿಯಾಗಿದೆ:

**ಶ್ರೇಯಾಂಕ (Rank):** ಇತ್ತೀಚಿನ ಜಾಗತಿಕ ಹಸಿವು ಸೂಚ್ಯಂಕದ (GHI 2026) ವರದಿಯ ಪ್ರಕಾರ, 122 ದೇಶಗಳ ಪಟ್ಟಿಯಲ್ಲಿ ಭಾರತಕ್ಕೆ 100 ನೇ ಸ್ಥಾನ ಲಭಿಸಿದೆ.

ಅಂಕ (Score): ಭಾರತದ ಉಊಐ ಅಂಕ 24.1



ಆಗಿದ್ದು, ದೇಶದಲ್ಲಿ ಹಸಿವಿನ ಮಟ್ಟ 'ಗಂಭೀರ' (Serious) ವಿಭಾಗದಲ್ಲಿದೆ ಎಂದು ಇದು ಸೂಚಿಸುತ್ತದೆ.

ನೆರೆಹೊರೆಯ ದೇಶಗಳು: ಶ್ರೀಲಂಕಾ, ನೇಪಾಳ ಮತ್ತು ಬಾಂಗ್ಲಾದೇಶಗಳಿಗಿಂತ ಭಾರತವು ಶ್ರೇಯಾಂಕದಲ್ಲಿ ಹಿಂದುಳಿದಿದೆ.

**3. ಪೌಷ್ಟಿಕಾಂಶ ಮತ್ತು ಮಕ್ಕಳ ಆರೋಗ್ಯ (Nutrition & Health Stats)**

ರಾಷ್ಟ್ರೀಯ ಕುಟುಂಬ ಆರೋಗ್ಯ ಸಮೀಕ್ಷೆಯ (NFHS-5) ಪ್ರಕಾರ, ದೇಶದ ಮಕ್ಕಳಲ್ಲಿ ಪೌಷ್ಟಿಕಾಂಶದ ಕೊರತೆಯ ಅಂಕಿ–ಅಂಶಗಳು ಹೀಗಿವೆ:

ಕುಂಠಿತ ಬೆಳವಣಿಗೆ (Stunting) 35.5% ವಯಸ್ಸಿಗೆ ತಕ್ಕಷ್ಟು ಎತ್ತರ ಇಲ್ಲದಿರುವ 5 ವರ್ಷದೊಳಗಿನ ಮಕ್ಕಳು. ತೂಕದ ಕೊರತೆ (Wasting) 19.3% ಎತ್ತರಕ್ಕೆ ತಕ್ಕಷ್ಟು ತೂಕ ಇಲ್ಲದಿರುವ ಅತಿಯಾದ ಅಪೌಷ್ಟಿಕತೆಯ ಮಕ್ಕಳು (ಇದು ಜಗತ್ತಿನಲ್ಲೇ ಗರಿಷ್ಠ ಮಟ್ಟದಲ್ಲಿದೆ). ಕಡಿಮೆ ತೂಕ (Underweight) 32.1% ವಯಸ್ಸಿಗೆ ತಕ್ಕಷ್ಟು ತೂಕ ಹೊಂದಿರದ ಮಕ್ಕಳು. ರಕ್ತಹೀನತೆ (Child Anaemia) 67.1% 6 ರಿಂದ 59 ತಿಂಗಳೊಳಗಿನ ಮಕ್ಕಳಲ್ಲಿ ರಕ್ತಹೀನತೆಯ ಕೊರತೆ.

**4. ಆಹಾರ ಪೋಲು ಮತ್ತು ತ್ಯಾಜ್ಯ (Food Wastage)** ಆಹಾರ ಪೋಲಾಗುವ ಪ್ರಮಾಣ: ಜಾಗತಿಕ ಮಟ್ಟದಲ್ಲಿ ಮತ್ತು ಭಾರತದಲ್ಲಿ ಉತ್ಪಾದನೆಯಾಗುವ ಒಟ್ಟು ಆಹಾರದಲ್ಲಿ ಸುಮಾರು 30% ರಿಂದ 40% ಭಾಗ ತಟ್ಟೆಗೆ ತಲುಪುವ ಮೊದಲೇ (ಸಾರಿಗೆ, ಸರಿಯಾದ ಶೀತಲ ಗೃಹಗಳಿಲ್ಲದೆ) ಅಥವಾ ಬಳಕೆದಾರರ ಮಟ್ಟದಲ್ಲಿ (ಮನೆ, ಮದುವೆ, ಸಮಾರಂಭಗಳಲ್ಲಿ) ವ್ಯರ್ಥವಾಗುತ್ತಿದೆ.

ಮನೆಯ ಹಂತದ ಪೋಲು: ಯುಎನ್‌ಇಪಿ (UNEP) ಆಹಾರ ತ್ಯಾಜ್ಯ ಸೂಚ್ಯಂಕದ ವರದಿಗಳ ಪ್ರಕಾರ, ಭಾರತದ ಮನೆಗಳಲ್ಲಿ ತಲಾ ವಾರ್ಷಿಕ ಸುಮಾರು 50 ಕೆಜಿ ಗೂ ಹೆಚ್ಚು ಆಹಾರ ಪೋಲಾಗುತ್ತಿದೆ.

**5. ಸರ್ಕಾರದ ಪ್ರಮುಖ ಯೋಜನೆಗಳು ಮತ್ತು ವಿತರಣೆ**

ಹಸಿವು ಮತ್ತು ಅಪೌಷ್ಟಿಕತೆಯನ್ನು ನೀಗಿಸಲು ಭಾರತ ಸರ್ಕಾರವು ವಿಶ್ವದಲ್ಲೇ ಅತಿ ದೊಡ್ಡ ಆಹಾರ ಭದ್ರತಾ ಜಾಲವನ್ನು ನಡೆಸುತ್ತಿದೆ:

1.ಪ್ರಧಾನ ಮಂತ್ರಿ ಗರೀಬ್ ಕಲ್ಯಾಣ್ ಅನ್ನ ಯೋಜನೆ (PMGKAY): ದೇಶದ ಸುಮಾರು 80 ಕೋಟಿಗೂ ಹೆಚ್ಚು ಬಡ ಜನರಿಗೆ ಸಾರ್ವಜನಿಕ ಪಡಿತರ ವ್ಯವಸ್ಥೆ (PDS) ಮೂಲಕ ಉಚಿತ ಧಾನ್ಯಗಳನ್ನು ಒದಗಿಸಲಾಗುತ್ತಿದೆ.

2.ಪಿಎಂ ಪೋಷಣ್ (PM-POSHAN/ಬಿಸಿಊಟ): ಶಾಲೆಗಳಲ್ಲಿ ಲಕ್ಷಾಂತರ ಮಕ್ಕಳಿಗೆ ಪೌಷ್ಟಿಕ ಮಧ್ಯಾಹ್ನದ ಬಿಸಿಊಟ ಒದಗಿಸುವ ವಿಶ್ವದ ಅತಿ ದೊಡ್ಡ ಶಾಲಾ ಆಹಾರ ಕಾರ್ಯಕ್ರಮ.

3.ಸಕ್ಷಮ್ ಅಂಗನವಾಡಿ ಮತ್ತು ಪೋಷಣ್ 2.0: ಗರ್ಭಿಣಿಯರು, ಬಾಣಂತಿಯರು ಮತ್ತು ಅಪೌಷ್ಟಿಕತೆಯಿಂದ ಬಳಲುವ ಮಕ್ಕಳಿಗೆ ಪೌಷ್ಟಿಕ ಆಹಾರ ಒದಗಿಸುವ ರಾಷ್ಟ್ರೀಯ ಅಭಿಯಾನ.

"ಅನ್ನದಾತೋ ಸುಖೀಭವ" ಎಂಬುದು ಭಾರತೀಯ ಸಂಸ್ಕೃತಿಯ ಮೂಲಮಂತ್ರ. ವಿಶ್ವ ಆಹಾರ ದಿನವು ನಮಗೆ ಆಹಾರದ ಮೌಲ್ಯವನ್ನು ಮತ್ತು ಅದನ್ನು ಬೆಳೆಯುವ ರೈತನ ಶ್ರಮವನ್ನು ಗೌರವಿಸಲು ನೆನಪಿಸುತ್ತದೆ. 'ಯಾರೂ ಹಸಿವಿನಿಂದ ಬಳಲಬಾರದು' ಎಂಬ ಜಾಗತಿಕ ಕನಸು ನನಸಾಗಲು ಆಹಾರ ಉಳಿತಾಯ ಮತ್ತು ಸುಸ್ಥಿರ ಆಹಾರ ಪದ್ಧತಿಯನ್ನು ನಮ್ಮ ದೈನಂದಿನ ಜೀವನದಲ್ಲಿ ಅಳವಡಿಸಿಕೊಳ್ಳುವುದೇ ಈ ದಿನದ ನಿಜವಾದ ಸಂದೇಶ.

ಭಾರತವು 'ಆಹಾರ ಧಾನ್ಯಗಳ ಕೊರತೆ ಇರುವ ದೇಶ' ಎನಿಸಿಕೊಂಡಿಲ್ಲ, ಬದಲಾಗಿ 'ಆಹಾರವನ್ನು ಅಗತ್ಯವಿರುವವರಿಗೆ ಸರಿಯಾಗಿ ತಲುಪಿಸುವ ಮತ್ತು ಅಪೌಷ್ಟಿಕತೆ ನೀಗಿಸುವ' ಸವಾಲನ್ನು ಎದುರಿಸುತ್ತಿದೆ.



**ಡಾ. ಪ್ರಸನ್ನ ದೇವರ ಮಠ ಅನಿಲಕುಮಾರ್**
**ಮಾಗಳ ಪದವೀಧರ ಪ್ರಾಥಮಿಕ ಶಿಕ್ಷಕರು**
**ಸರಕಾರಿ ಹಿರಿಯ ಪ್ರಾಥಮಿಕ ಶಾಲೆ,**
**ಮುದೇನೂರು,**
**ಹೂವಿನಹಡಗಲಿ, ವಿಜಯನಗರ ಜಿಲ್ಲೆ**

Hosapete Dhwani Kannada Daily Editor, Printer, Publisher & Owned By K. Prakash Kakubalu, 120, 1ST Ward, Kakubal Post Hospet, Ballary, Dist : Vijayanagara Karnataka State,
Printed at Dwaraka Printers & Publishers, Plot No. 12, Opp. Govt. Girls Hostel, GaneshaNagara Koppal-583231 Koppal District, Karnataka State,
e-mail : hosapetedhwani32026@gmail.com, Cell : 9342568684